ಸಂಪುಟ : 9 ಸಂಚಿಕೆ 202 ಪುಟ : 4 ಬೆಲೆ: 3.00 ಗುರುವಾರ ಸೆಪ್ಟೆಂಬರ್ 19 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 202 Pages : 4 Price : 3.00 Thursday september 19 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಜಿಲ್ಲಾ ಮಟ್ಟದ 'ಜನತಾ ದರ್ಶನ' ಕಾರ್ಯಕ್ರಮಕ್ಕೆ ಸಚಿವ ಎಚ್.ಕೆ. ಪಾಟೀಲ ಚಾಲನೆ

ಸರ್ಕಾರದ ಹೆಸರು ಕೆಡಿಸುವ ಪ್ರವೃತ್ತಿ ನಿಲ್ಲಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಜೆಯೇ ನಿಜವಾದ ಪ್ರಭು. ಪ್ರಜೆಗಳ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ನೀಡುವ ಕಾರ್ಯವಾಗಲಿ. ಅನವಶ್ಯಕ ಅಲೆದಾಟ ತಪ್ಪಿಸುವುದೇ ಜನತಾದರ್ಶನ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ಬುಧವಾರ ಜಿಲ್ಲಾಡಳಿತದಿಂದ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಸಚಿವರು ಮಾತನಾಡುತ್ತಿದ್ದರು.

ಸಾರ್ವಜನಿಕರು ಸರ್ಕಾರಿ ಕಚೇರಿಗಳಲ್ಲಿ ಒಂದು ನಿಮಿಷದ ಕೆಲಸ ಇದ್ದರೂ ಸಹ ತಿಂಗಳುಗಟ್ಟಲೇ ಅಲೆದಾಡಿಸುವುದು, ಜನರಿಗೆ ವಿನಾಕಾರಣ ನೋವು, ವಿಳಂಬ, ದ್ರೋಹ ಮಾಡಿ ಸರ್ಕಾರಕ್ಕೆ ಕೆಟ್ಟ ಹೆಸರು ತರುವ ಪ್ರವೃತ್ತಿ ಸಂಪೂರ್ಣವಾಗಿ ನಿಲ್ಲಬೇಕು. ಜನರ ಸಮೀಪ ತೆರಳಿ ಅವರ ಸಮಸ್ಯೆಗಳನ್ನು ಈಡೇರಿಸುವ ಕೆಲಸವಾಗಬೇಕು ಎಂದರು.

ಜಿಲ್ಲಾ ಮಟ್ಟದ ಜನತಾದರ್ಶನ ಕಾರ್ಯಕ್ರಮವನ್ನು ಕಳೆದ ವರ್ಷ ಸೆಪ್ಟೆಂಬರ್ 30ರಂದು ಮಾಡಲಾಗಿತ್ತು. ಅಂದು ಸಾರ್ವಜನಿಕರು ಅನೇಕ ವಿಧದ ಅಹವಾಲುಗಳನ್ನು ಹೊತ್ತು

ರಾಜ್ಯ ಖನಿಜ ನಿಗಮದ ಅಧ್ಯಕ್ಷರೂ ಆಗಿರುವ ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಜನತಾ ದರ್ಶನದ ಮೂಲಕ ಜನರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ವೇದಿಕೆ ಇದಾಗಿದೆ. ವಿನಾಕಾರಣ ವಿಳಂಬ ಧೋರಣೆ ತಪ್ಪಿಸುವ ಮೂಲಕ ತುರ್ತಾಗಿ ಜನರ ಕಷ್ಟಗಳಿಗೆ ಸ್ಪಂದಿಸಿ ಕೆಲಸ ನಿರ್ವಹಿಸುವುದಾಗಿದೆ. ಇದರ ಸಂಪೂರ್ಣ ಸದುಪಯೋಗವನ್ನು ಜಿಲ್ಲೆಯ ಜನತೆ ಪಡೆಯಬೇಕೆಂದರು.

ಆಗಮಿಸಿ ಒಟ್ಟು 920 ಅರ್ಜಿಗಳನ್ನು ಸಲ್ಲಿಸಿದ್ದರು. ಹಲವಾರು ಅಹವಾಲುಗಳಿಗೆ ಪರಿಹಾರ ಕಂಡುಕೊಳ್ಳಲಾಗಿದೆ. 830 ಅಹವಾಲುಗಳಿಗೆ ತಾರ್ಕಿಕ ಅಂತ್ಯ ನೀಡಲಾಗಿದೆ. ಬಾಕಿ ಉಳಿದ 83 ಅಹವಾಲುಗಳಲ್ಲಿ 40 ಅಹವಾಲುಗಳಿಗೆ ಪರಿಹಾರ ಕಂಡುಕೊಳ್ಳಲಾಗಿದೆ. ಉಳಿದ ಅಹವಾಲುಗಳು ವೈಯಕ್ತಿಕ ಹಾಗೂ ಅಪೂರ್ಣ ದಾಖಲೆಗಳನ್ನು ಒಳಗೊಂಡಿವೆ. ಮತ್ತು ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿರುವುದರಿಮದ ಪರಿಹಾರ ಪ್ರಯತ್ನ ವಿಳಂಬವಾಗಿದೆ. ಅವುಗಳ ಪರಿಹಾರಕ್ಕೂ ಪ್ರಾಮಾಣಿಕ ಪ್ರಯತ್ನ ನಡೆದಿದೆ ಎಂದರು.

ಇಂದಿನ ಜನತಾದರ್ಶನ ಕಾರ್ಯಕ್ರಮದಲ್ಲಿ ಗದಗ ತಾಲೂಕು ಕಚೇರಿಯಲ್ಲಿ ಬಾಕಿ ಇರುವ ಅರ್ಜಿಗಳ ವಿಚಾರಣೆ ಕೈಗೊಳ್ಳುವ ಮೂಲಕ ಪರಿಹಾರಕ್ಕೆ ಯತ್ನಿಸಲಾಗುವುದು. ಜೊತೆಗೆ ಜಿಲ್ಲೆಯ ಇನ್ನೊಂದು ತಾಲೂಕು ಕಚೇರಿಯಲ್ಲಿ ಬಾಕಿ ಇರುವ ಅರ್ಜಿಗಳಿಗೂ ಸಹ ಈ ಕಾರ್ಯಕ್ರಮದಲ್ಲಿಯೇ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಾಗುವುದು ಎಂದರು.

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಜನತಾದರ್ಶನ ಕಾರ್ಯಕ್ರಮದ ಬಗ್ಗೆ ವಿಶೇಷ ಗಮನ ಹರಿಸುತ್ತಾರೆ. ಜಿಲ್ಲೆಗಳಲ್ಲಿ ಜರುಗುವ ಜನತಾದರ್ಶನ ಕಾರ್ಯಕ್ರಮದಲ್ಲಿ ಸ್ವೀಕೃತಿಯಾದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸುವ ಮೂಲಕ ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಉತ್ಸುಕರಾಗಿದ್ದಾರೆ ಎಂದು ನುಡಿದರು.

ಸರ್ಕಾರ ಜಾರಿಗೊಳಿಸಿದ ಪಂಚಗ್ಯಾರಂಟಿಗಳ ಅನುಷ್ಠಾನದಲ್ಲಿ ಗದಗ ಜಿಲ್ಲೆ ಮುಂಚೂಣಿಯಲ್ಲಿದೆ. ಶೇ 99.2ರಷ್ಟು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮೂಲಕ ಸಾಧನೆ ಮಾಡಲಾಗಿದೆ ಎಂದು ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ವೇದಿಕೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಸಿಇಓ ಭರತ್ ಎಸ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಮೀನಾ,

ಇದು ಜಿಲ್ಲಾ ಮಟ್ಟದ ಎರಡನೇ ಜನತಾದರ್ಶನ ಕಾರ್ಯಕ್ರಮವಾಗಿದ್ದು, ಕಾರ್ಯಶೈಲಿಯಲ್ಲಿ ಸ್ವಲ್ಪ ಬದಲಾವಣೆ ಮಾಡಲಾಗಿದೆ. ಜನಸಾಮಾನ್ಯರಿಗೆ ಅರ್ಜಿ ಸಲ್ಲಿಸಲು ಆನ್‌ಲೈನ್ ಮೂಲಕ ಅವಕಾಶ ಕಲ್ಪಿಸಲಾಗಿತ್ತು. ಗದಗ ತಾಲೂಕಿನ 44 ಅಹವಾಲು ಸೇರಿದಂತೆ ಒಟ್ಟು ಜಿಲ್ಲೆಯಲ್ಲಿ 116 ಅಹವಾಲುಗಳು ನೋಂದಣಿಯಾಗಿವೆ. ಅಲ್ಲದೇ ನೇರವಾಗಿಯೂ ಜನತಾದರ್ಶನ ಕಾರ್ಯಕ್ರಮಕ್ಕೆ ಆಗಮಿಸಿ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಹಿರಿಯ ಅಧಿಕಾರಿಗಳು ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಒದಗಿಸಲು ಪ್ರಯತ್ನಿಸಲಿದ್ದಾರೆ.

– ಡಾ. ಎಚ್.ಕೆ. ಪಾಟೀಲ.
ಜಿಲ್ಲಾ ಉಸ್ತುವಾರಿ ಸಚಿವರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಇದ್ದರು.

ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಅತಿಥಿಗಳನ್ನು ಸ್ವಾಗತಿಸಿದರು. ಉಪವಿಭಾಗಾಧಿಕಾರಿ ಗಂಗಪ್ಪ ಎಂ ವಂದಿಸಿದರು. ದತ್ತ ಪ್ರಸನ್ನ ಪಾಟೀಲ ಕಾರ್ಯಕ್ರಮ ನಿರ್ವಹಿಸಿದರು.

ಜನತಾ ದರ್ಶನದಲ್ಲಿ 817 ಅಹವಾಲುಗಳ ಸ್ವೀಕಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತದಿಂದ ಬುಧವಾರ ಜಿಲ್ಲಾಡಳಿತ ಭವದ ಆವರಣದಲ್ಲಿ ಏರ್ಪಡಿಸಿದ್ದ ಗದಗ ಜಿಲ್ಲಾ ಮಟ್ಟದ ಜನತಾ ದರ್ಶನದಲ್ಲಿ ಸಂಜೆ 6.15ರ ವೇಳೆಗೆ ಗದಗ ತಾಲೂಕಿನಿಂದ 530, ಗಜೇಂದ್ರಗಡ ತಾಲೂಕಿನಿಂದ 29, ಲಕ್ಷ್ಮೇಶ್ವರ ತಾಲೂಕಿನಿಂದ 55, ಮುಂಡರಗಿ ತಾಲೂಕಿನಿಂದ 81, ನರಗುಂದ ತಾಲೂಕಿನಿಂದ 26, ರೋಣ ತಾಲೂಕಿನಿಂದ 59, ಶಿರಹಟ್ಟಿ ತಾಲೂಕಿನಿಂದ 37 ಹೀಗೆ ಒಟ್ಟು 817 ಅಹವಾಲುಗಳು ಸ್ವೀಕೃತಗೊಂಡಿವೆ.

ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಎಡಿಸಿ ಸಿದ್ರಾಮೇಶ್ವರ

ವಾಸ್ತುಶಿಲ್ಪಕ್ಕೆ ವಿಶ್ವಕರ್ಮರ ಕೊಡುಗೆ ಅಪಾರ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಸೃಜನಶೀಲ ವಿಚಾರಧಾರೆಯುಳ್ಳವರಾಗಿದ್ದ ಶ್ರೀ ವಿಶ್ವಕರ್ಮರು ಕೈಗೊಂಡ ಕಾರ್ಯಗಳು ಸ್ಮರಣೀಯವಾಗಿವೆ ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.

ನಗರದ ಸಾಹಿತ್ಯ ಭವನದಲ್ಲಿ ಬುಧವಾರ ಆಯೋಜಿಸಿದ್ದ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಶ್ವಕರ್ಮ ಸಮಾಜಕ್ಕೆ ದೈವಶಕ್ತಿ ಇರುವ ಕಾರಣ ಸಕಲ ಕಲೆಗಳನ್ನು ಕರಗತ ಮಾಡಿಕೊಂಡು ಸಮಾಜದಲ್ಲಿ ಸ್ಮರಣೀಯ ಸೇವೆಯಲ್ಲಿ ತೊಡಗಿದ್ದಾರೆ. ವಿಶ್ವಕರ್ಮ ಸಮಾಜವು ನಿರ್ಮಿಸಿದ ಶಿಲ್ಪಕಲೆಯು ಶ್ರೀಮಂತಿಕೆಯಿಂದ ಕೂಡಿದೆ ಎಂದರು.

ವಿಶ್ವಕರ್ಮ ಸಮಾಜದ ಜಿಲ್ಲಾ ಅಧ್ಯಕ್ಷ ನಾಗೇಶ ಕುಮಾರ್ ಮಾತನಾಡಿ, ವಿಶ್ವಕರ್ಮ ಸಮಾಜವು ಜಗತ್ತಿಗೆ ಅದ್ಭುತ ಕಲೆ ನೀಡಿದ ಸಮಾಜವಾಗಿದೆ. ಜಿಲ್ಲಾಡಳಿತ ನಮ್ಮ ಕಲೆಗೆ ಸಹಕರಿಸಿ ಬೇಕಾದ ಸೌಲಭ್ಯಗಳನ್ನು ಒದಗಿಸುವಂತಾಗಲಿ. ಅದರಂತೆ ನಮ್ಮತನವನ್ನು ನಾವೆಂದಿಗೂ ಬಿಡದೇ ಕೆಲಸದಲ್ಲಿ ನಿರತರಾಗಬೇಕು. ವಿಶ್ವಕರ್ಮ ಜಯಂತಿಯನ್ನು ಸರ್ಕಾರಿ ಕಾರ್ಯಕ್ರಮವನ್ನಾಗಿ ಆಚರಿಸಲಾಗುತ್ತಿರುವುದು ಸಂತಸ ತಂದಿದೆ ಎಂದರು.

▸▸ 2ನೇ ಪುಟಕ್ಕೆ

ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಅಹವಾಲುಗಳ ಸುರಿಮಳೆ

ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವರು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಬುಧವಾರ ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಜರುಗಿದ ಜನತಾ ದರ್ಶನದಲ್ಲಿ ಸಾರ್ವಜನಿಕರಿಂದ ಅಹವಾಲುಗಳ ಸುರಿಮಳೆಯೇ ಹರಿಯಿತು.

ಮಹಾಂತೇಶ ನಿಲೂವಳಗಿ ಅವರು ಗದಗ ನಗರದ 22ನೇ ವಾರ್ಡ್‌ನಲ್ಲಿ ಮೂಲಭೂತ ಸೌಕರ್ಯಗಳಾದ ನೀರು, ಬೀದಿ ದೀಪದ ಸೌಲಭ್ಯಗಳಿಲ್ಲ ಎಂದು ಹೇಳಿದರು. ಪ್ರತಿಯಾಗಿ ಸ್ಪಂದಿಸಿದ ಸಚಿವರು, 15 ದಿನದೊಳಗೆ ನೀರು ಮತ್ತು ವಿದ್ಯುತ್ ದೀಪದ ಸಮಸ್ಯೆಯನ್ನು ಪರಿಸರಿಸಬೇಕು ಎಂದು ನಗರಸಭೆಯ ಪೌರಾಯುಕ್ತರಿಗೆ ಸೂಚಿಸಿದರು.

ರಾಮಮೂರ್ತಿ ಕುಲಕರ್ಣಿ ಯವರು ಗದಗದಿಂದ ರೋಣ, ಗಜೇಂದ್ರಗಡ ಹೋಗುವ ಬಸ್‌ಗಳು ಹೊಸ ಬಸ್ ನಿಲ್ದಾಣದಿಂದ

ಹೋಗುತ್ತಿದ್ದು, ಹಳೆಯ ಬಸ್ ನಿಲ್ದಾಣಕ್ಕೆ ಬರುವುದಿಲ್ಲ ಎಂದರು. ಪ್ರತಿಯಾಗಿ ಕೆಎಸ್‌ಆರ್‌ಟಿಸಿ ಅಧಿಕಾರಿ ಹಳೆಯ ಬಸ್ ನಿಲ್ದಾಣಕ್ಕೆ ಹೋಗುವುದರಿಂದ ಘಟಕಕ್ಕೆ ನಷ್ಟವಾಗುತ್ತದೆ ಎಂದು ಹೇಳಿದರು. ಇದನ್ನು ಆಲಿಸಿದ ಸಚಿವರು, ಒಂದು ತಿಂಗಳು ಗದಗ ಘಟಕದಿಂದ ಗಜೇಂದ್ರಗಡ, ರೋಣಕ್ಕೆ ಹೋಗುವ ಬಸ್‌ಗಳನ್ನು ಹಳೆಯ ಬಸ್ ನಿಲ್ದಾಣಕ್ಕೂ ಕಳುಹಿಸಿ. ಅದಾದ ನಂತರವೂ ಘಟಕಕ್ಕೆ ಹಾನಿ ಆದಲ್ಲಿ ಹಳೆ ಬಸ್ ನಿಲ್ದಾಣದಿಂದ ಹೊಸ ಬಸ್ ನಿಲ್ದಾಣಕ್ಕೆ ಹೋಗುವ ನಗರ ಸಾರಿಗೆ ಬಸ್‌ಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಸಂಚರಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ವೀರಪ್ಪ ಸೌಲಿ ಅವರು ತಮ್ಮ ಹೊಲದಿಂದ ಮುಖ್ಯ ರಸ್ತೆಗೆ ಯಾವುದೇ ಸಂಪರ್ಕವಿಲ್ಲ. ಬೆಳೆದ ಫಸಲನ್ನು ತೆಗೆದು-ಕೊಂಡು ಹೋಗಲು ಸಮಸ್ಯೆಯಾಗುತ್ತಿದೆ ಎಂದರು. ಇದಕ್ಕೆ ಪ್ರತಿಯಾಗಿ ಸಚಿವರು ಕೂಡಲೇ ಗ್ರಾಮ ನಕ್ಷೆಯನ್ನು ಪರಿಶೀಲಿಸಿ, ಹೊಲಕ್ಕೆ ಹೋಗುವ ಮಾರ್ಗವನ್ನು ಮಾಡಬೇಕೆಂದು ತಹಸೀಲ್ದಾರರಿಗೆ ಸೂಚಿಸಿದರು.

ಬಸವರಾಜ ನೀಲಗುಂದ ಅವರು ಮೇಕೆ ದೊಡ್ಡಿಯನ್ನು ನಿರ್ಮಿಸಿಕೊಂಡಿದ್ದು, ಇದುವರೆಗೆ ಯಾವುದೇ ರೀತಿಯ ಅನುದಾನ ದೊರೆತಿಲ್ಲ ಎಂದರು. ಈ ಸಮಸ್ಯೆಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿದ ಸಚಿವರು, ಕುರಿ ದೊಡ್ಡಿ ಮತ್ತು ದನ ದೊಡ್ಡಿಯ ಹಣವನ್ನು ನೇರವಾಗಿ ಫಲಾನುಬಾವಿಗಳಿಗೆ ಶೀಘ್ರವೇ ನೀಡಬೇಕು ಎಂದು ಜಿ.ಪಂ ಸಿಇಒ ಅವರಿಗೆ ಆದೇಶಿಸಿದರು.

ಆರ್.ಬಿ. ತಳವಾರ ಅವರು ಗಂಗಾಕಲ್ಯಾಣ ಅರ್ಜಿ ಸಲ್ಲಿಸಿದ್ದು ಅದನ್ನು ತಡೆಹಿಡಿಯಲಾಗಿದೆ ಎಂದರು. ಇದಕ್ಕೆ ಪ್ರತಿಯಾಗಿ ಸಚಿವರು ಈ ಅರ್ಜಿಯನ್ನು ಪರಿಶೀಲನೆ ಮಾಡಿ ಆದಷ್ಟು ಬೇಗನೆ ಯೋಜನೆಯನ್ನು ಅರ್ಹರಿಗೆ ತಲುಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹೊಂಬಳ ಗ್ರಾಮದ ಫಕ್ಕರುಸಾಬ ಮುಲ್ಲಾ ಅವರು, 50 ವರ್ಷದಿಂದ ಗ್ರಾಮಸ್ಥರು ಬಣವಿಯನ್ನು ಇಟ್ಟುಕೊಂಡಿದ್ದು ಈಗ ಪೊಲೀಸರು ತೆರವು ಮಾಡಲು ಹೇಳುತ್ತಿದ್ದಾರೆ. ಇದ್ದಕೆ ಪರಿಹಾರ ಸೂಚಿಸಿ ಎಂದರು. ಸಮಸ್ಯೆ ಆಲಿಸಿದ ಸಚಿವರು, ಈ ಪ್ರಕರಣವನ್ನು ಕೂಡಲೇ ಪರಿಶೀಲಿಸಿ 15 ದಿನದೊಳಗೆ ತಾರ್ಕಿಕ ಪರಿಹಾರ ನೀಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಶಾಂತಮ್ಮ ಬೆಂಗರೂ ಅವರು ನಗರದ ರೇಣುಕಾ ನಗರದಲ್ಲಿ ಬಂಗಿ ರಸ್ತೆ ಎಂದು ಇರುವ ಜಾಗವನ್ನು ಅನಧಿಕೃತವಾಗಿ ಅತಿಕ್ರಮಿಸುತ್ತಿದ್ದಾರೆ ಎಂದರು. ಇದಕ್ಕೆ ಉತ್ತರಿಸಿದ ಸಚಿವರು 2 ದಿನದೊಳಗೆ ನಗರಸಭೆ ಆಯುಕ್ತರು ಖುದ್ದು ಸ್ಥಳಕ್ಕೆ ಭೇಟಿ ನೀಡಿ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ಪೌರಾಯುಕ್ತರಿಗೆ ಆದೇಶಿಸಿದರು.

ಬಸಪ್ಪ ಪತ್ತಾರ ಅವರು 2002ನೇ ಇಸವಿಯಲ್ಲಿ ರಾಜೀವಗಾಂಧಿ ನಿಗಮಕ್ಕೆ ವಸತಿ ನಿಲಯ ನಿರ್ಮಾಣಕ್ಕೆ ಜಾಗ ನೀಡಿದ್ದು, ಇದುವರೆಗೆ ಯಾವುದೇ ಪರಿಹಾರ ದೊರೆತಿಲ್ಲ ಎಂದರು. ಪ್ರತಿಯಾಗಿ ಸಚಿವರು ಒಂದು ತಿಂಗಳೊಳಗೆ ಪ್ರಕರಣವನ್ನು ಪರಿಶೀಲನೆ ಮಾಡಿ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ರಾಜೀವ ಗಾಂಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚಿಸಿದರು.

ವಿ.ಆರ್. ಹೀರೆಮಠ ಅವರು ನಗರದ 33ನೇ ವಾರ್ಡ್‌ಗೆ ಯಾವುದೇ ರೀತಿಯ ಮೂಲಭೂತ ಸೌಕರ್ಯಗಳು ಇಲ್ಲದಾಗಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಹೇಳಿದರು. ಇದಕ್ಕೆ ಸಚಿವರು ಕೂಡಲೇ ಬೀದಿ ದೀಪವನ್ನು ಅಳವಡಿಸಬೇಕೆಂದು ನಗರಸಭೆ ಪೌರಾಯುಕ್ತರಿಗೆ ಆದೇಶಿಸಿದರು.



ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ
–ಸುಭಾಷಿತ

ಸಂಪಾದಕೀಯ

ಒಂದು ದೇಶ, ಒಂದು ಚುನಾವಣೆ ವರದಿ ಸಲ್ಲಿಕೆ

ದೇಶದಲ್ಲಿ ಮತ್ತೊಮ್ಮೆ ಒಂದು ದೇಶ ಒಂದು ಚುನಾವಣೆ ವಿಷಯ ಮುನ್ನೆಲೆಗೆ ಬಂದಿದೆ. ಒಂದು ದೇಶ ಒಂದು ಚುನಾವಣೆ ಬಗ್ಗೆ ವರದಿ ಸಲ್ಲಿಸಲು ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದಲ್ಲಿ ಸಮಿತಿ ರಚಿಸಲಾಗಿತ್ತು. ಸಮಿತಿ ತನ್ನ ವರದಿಯನ್ನು ಕೇಂದ್ರ ಸರಕಾರಕ್ಕೆ ಸಲ್ಲಿಸಿದೆ. ವರದಿಯನ್ನು ಕೇಂದ್ರ ಸಚಿವ ಸಂಪುಟವೂ ಅನುಮೋದಿಸಿದೆ.

ಸದ್ಯಕ್ಕೆ ಸಲ್ಲಿಕೆಯಾಗಿರುವ ವರದಿಯ ಅಂಶಗಳು ಇನ್ನೂ ಸ್ಪಷ್ಟವಾಗಿ ಹೊರಬಂದಿಲ್ಲ. ಆದರೆ ಒಂದು ದೇಶ ಒಂದು ಚುನಾವಣೆಗೆ ಸಕಾರಾತ್ಮಕವಾಗುವ ಅಂಶಗಳು ವರದಿಯಲ್ಲಿ ಅಡಕವಾಗಿರುವುದು ಸ್ಪಷ್ಟವಾಗಿದೆ. ಲೋಕಸಭೆ ಚುನಾವಣೆ ಪ್ರಣಾಳಿಕೆಯಲ್ಲಿ ಬಿಜೆಪಿ ಸಹ ಭರವಸೆ ನೀಡಿತ್ತು. ಸಹಜವಾಗಿ ಬಿಜೆಪಿ ಒಂದು ದೇಶ ಒಂದು ಚುನಾವಣೆಗೆ ಸಕಾರಾತ್ಮಕ ಅಂಶಗಳನ್ನೇ ಕ್ರೂಢೀಕರಣ ಮಾಡಿರುತ್ತದೆ. ಅದೇ ರೀತಿ ಕಾಂಗ್ರೆಸ್ ಇದಕ್ಕೆ ವಿರೋಧವನ್ನು ವ್ಯಕ್ತಪಡಿಸಿದೆ.

ಒಂದು ದೇಶ ಒಂದು ಚುನಾವಣೆ ದೇಶದ ಚುನಾವಣೆ ವ್ಯವಸ್ಥೆಗೆ ಹೊಸ ರೂಪ ಕೊಡಲಿದೆ. ದೇಶದಲ್ಲಿ ಚುನಾವಣೆ ರಾಜಕಾರಣ ಪ್ರತಿ ದಿನ ಒಂದಿಲ್ಲೊಂದು ಕಡೆ ನಡೆಯುವುದರಿಂದ ದೇಶದಲ್ಲಿ ಚುನಾವಣೆ ಎನ್ನುವುದು ನಿತ್ಯದ ಚರ್ಚಾ ವಿಷಯವಾಗಿದೆ.

ಪ್ರತಿ ವರ್ಷ ದೇಶದ ಯಾವುದಾದರೊಂದು ರಾಜ್ಯದಲ್ಲಿ ವಿಧಾನಸಭೆ ನಡೆದೇ ನಡೆಯುತ್ತದೆ. ಇನ್ನು ಆರು ತಿಂಗಳಿಗೊಮ್ಮೆ ಉಪಚುನಾವಣೆ. ಹೀಗೆ ದೇಶದ ರಾಜಕೀಯ ವ್ಯವಸ್ಥೆಯಲ್ಲಿ ಚುನಾವಣೆಗೆ ಖರ್ಚು ವೆಚ್ಚಗಳನ್ನು ಮಾಡುವುದು ಬಹುದೊಡ್ಡ ಕೆಲಸ. ಹೀಗಾಗಿ ಒಂದು ದೇಶ ಒಂದು ಚುನಾವಣೆಯಂದ ಚುನಾವಣೆ ವ್ಯವಸ್ಥೆಯಲ್ಲಿ ಸಾಕಷ್ಟು ಸುಧಾರಣೆಯಾಗಲು ಸಾಧ್ಯ.

ಆದರೆ ಏಕಕಾಲಕ್ಕೆ ಚುನಾವಣೆ ನಡೆಸುವುದು ಸಹ ಕಷ್ಟ ಸಾಧ್ಯವೇ. ಮತ ಯಂತ್ರಗಳ ಲಭ್ಯತೆ, ಮತ ಎಣಿಕೆ, ಸಿಬ್ಬಂದಿಗಳ ಲಭ್ಯತೆ, ಹಲವು ಹಂತಗಳಲ್ಲಿ ಚುನಾವಣೆ ನಡೆಯುವುದರಿಂದ ಚುನಾವಣೆ ಪ್ರಕ್ರಿಯೆ ದೀರ್ಘಕಾಲದ ವರೆಗೆ ನಡೆಯುವ ಸಾಧ್ಯತೆಯಿದೆ. ಈ ಎಲ್ಲ ಅಂಶಗಳನ್ನು ಪರಿಗಣಿಸಿ ಕೇಂದ್ರ ಸರಕಾರ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕಿದೆ.

ಕುಸ್ಮಾ ವತಿಯಿಂದ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ರಾಘವೇಂದ್ರ ಹಿಟ್ನಾಳ

ಕೇರಳ ಶಿಕ್ಷಣ ಎಲ್ಲರಿಗೂ ಮಾದರಿ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಶಿಕ್ಷಕರು ನಮ್ಮ ದೇಶದ ನಿರ್ಮಾಪಕರು. ಶಿಕ್ಷಣದಿಂದಲೇ ಎಲ್ಲವೂ ಸಾಧಿಸಲು ಸಾಧ್ಯ. ಕೇರಳದ ಶಿಕ್ಷಣ ಎಲ್ಲರಿಗೂ ಮಾದರಿಯಾಗಿದೆ. ನಮ್ಮ ರಾಜ್ಯವನ್ನೂ ಸಹ ಆ ಸ್ಥಾನಕ್ಕೆ ಒಯ್ಯುವ ಶಕ್ತಿ ಶಿಕ್ಷಕರಿಗಿದೆ ಎಂದು ಶಾಸಕ ರಾಘವೇಂದ್ರ ಹಿಟ್ನಾಳ ಹೇಳಿದರು.

ನಗರದಲ್ಲಿ ಮಂಗಳವಾರ ಕೊಪ್ಪಳ ತಾಲ್ಲೂಕು ಅನುದಾನ ರಹಿತ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟ (ಕುಸ್ಮಾ) ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ, ಉತ್ತಮ ಶಿಕ್ಷಕರ ಪ್ರಶಸ್ತಿ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಅನುದಾನರಹಿತ ಶಾಲಾ ಆಡಳಿತ ಮಂಡಳಿ ವತಿಯಿಂದ ನಡೆದ ಸರ್ವಪಲ್ಲಿ ರಾಧಾಕೃಷ್ಣನವರ ಜಯಂತ್ಯೋತ್ಸವ ಹಾಗೂ ಶಿಕ್ಷಣ ದಿನಾಚರಣೆ ಜೊತೆಗೆ ಶಿಕ್ಷಕರಿಗೆ ಪ್ರಶಸ್ತಿ ನೀಡುವ ಕಾರ್ಯಕ್ರಮ ಹಮ್ಮಿಕೊಂಡಿದ್ದು ಸಂತಸ ಮತ್ತು ಹರ್ಷ ತಂದಿದೆ. ಶಿಕ್ಷಕರಾಗಿ ರಾಷ್ಟ್ರದ ಅತ್ಯುನ್ನತ ಸ್ಥಾನವನ್ನು ಪಡೆದವರು ಸರ್ವಪಲ್ಲಿ ರಾಧಾಕೃಷ್ಣರವರು.

ಅನುದಾನರಹಿತ ಶಾಲೆಗಳಿಗೆ ಸವಲತ್ತು ಕೊಡಿಸುವ ಕುರಿತು ಕಲ್ಯಾಣ ಕರ್ನಾಟಕ ಮಂಡಳಿಯಲ್ಲಿ ಚರ್ಚೆಮಾಡಿದ್ದೇವೆ. ಪ್ರಾಥಮಿಕ ಹಂತದಲ್ಲಿಯೇ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡುವಂತಾಗಬೇಕು. ಮಕ್ಕಳಲ್ಲಿಯ ಪ್ರತಿಭೆಗಳನ್ನು ಗುರುತಿಸುವ ಕೆಲಸ ಮಾಡಬೇಕು.



ಪಾಲಕರೂ ಸಹ ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕು. ಕಲ್ಯಾಣ ಕರ್ನಾಟಕದಲ್ಲಿ ಶಿಕ್ಷಣಕ್ಕೆ ಹೆಚ್ಚು ಅನುದಾನ ಕೊಡುವ ಕೆಲಸ ಮಾಡಿದ್ದೇವೆ. ಕೋಚಿಂಗ್ ಸೆಂಟರ್ ಟ್ರೇನಿಂಗ್ ಸೆಂಟರ್ ತೆರೆಯುವ ಕೆಲಸ ಮಾಡಿದ್ದೇವೆ. ನಾನು ಜಿಲ್ಲಾ ಪಂಚಾಯತ್ ಅಧ್ಯಕ್ಷನಾಗಿದ್ದಾಗ ಉತ್ತಮ ಸ್ಥಾನ ಹೊಂದಿತ್ತು. ಆದರೆ ಈಗ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ 25ರ ಆಸುಪಾಸಿನಲ್ಲಿದೆ. ನಮ್ಮ ಜಿಲ್ಲೆ ಸಹ ರಾಜ್ಯದಲ್ಲಿಯೇ ಪ್ರಥಮ ಸ್ಥಾನಕ್ಕೆ ಬರುವಂತಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಶಿರಹಟ್ಟಿ ಬಾಳೆಹೊಸುರ ಭಾವೈಕ್ಯತಾ ಮಹಾಸಂಸ್ಥಾನ ಪೀಠದ ಫಕೀರ ದಿಂಗಾಲೇಶ್ವರ ಸ್ವಾಮೀಜಿಯವರು ಮಾತನಾಡಿ ಇತ್ತೀಚಿನ ದಿನಗಳಲ್ಲಿ ಶೈಕ್ಷಣಿಕ ಪ್ರಮಾಣ ಅಧಿಕವಾಗಿದ್ದರೂ ಜ್ಞಾನ ಸಂಪಾದನೆ ಮಾತ್ರ ಕಡಿಮೆಯಾಗುತ್ತಿದೆ. ಕಲಿಯುವ ವಯಸ್ಸಿನಲ್ಲಿ ಸರಿಯಾಗಿ ಶಿಕ್ಷಣವನ್ನು ಕಲಿತು ಅವಮಾನ, ಟೀಕೆ ಟಿಪ್ಪಣಿಗಳನ್ನು ಎದುರಿಸಿದರೆ ಬದುಕಿನಲ್ಲಿ ಸನ್ಮಾನಗಳು ಸಿಗಲು ಸಾಧ್ಯ ಜೀವನದಲ್ಲಿ ಏನನ್ನಾದರೂ ಸಾಧಿಸಬೇಕು ಎಂದುಕೊಂಡವರಿಗೆಯೇ ಕಷ್ಟಗಳು ಬರುತ್ತವೆ. ಬದುಕಿನಲ್ಲಿ ಎಲ್ಲ ಸವಾಲು ಎದುರಿಸುವ ಧೈರ್ಯ ಗಳಿಸಿಕೊಳ್ಳಬೇಕು, ಇದರಿಂದ ಉತ್ತಮ ಬದುಕು ರೂಪಿಸಿಕೊಳ್ಳಲು ಸಾಧ್ಯ ಎಂದು ಹೇಳಿದರು.

ಇನ್ಸೈಟ್ಸ್ ಐಎಎಸ್ ಸಂಸ್ಥಾಪಕ ವಿನಯಕುಮಾರ ಜಿ.ಬಿ ವಿಶೇಷ ಉಪನ್ಯಾಸ ನೀಡಿದರು. ವಿಧಾನಪರಿಷತ್ ಸದಸ್ಯೆ ಹೇಮಲತಾ ನಾಯಕ, ಕ್ಷೇತ್ರ ಶಿಕ್ಷಣಾಧಿಕಾರಿ ಶಂಕರಯ್ಯ ಟಿ.ಎಸ್., ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ್, ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಡಾ. ಬಸವರಾಜ ಕ್ಯಾವಟರ್, ಕುಸ್ಮಾ ಸಂಘಟನೆಯ ಅಧ್ಯಕ್ಷ ಶಾಹೀದಹುಸೇನ ತಹಸೀಲ್ದಾರ್, ಕಾರ್ಯದರ್ಶಿ ನಾಗರಾಜ ಗುಡಿ, , ಪತ್ರಕರ್ತ ಸಿರಾಜ್ ಬಿಸರಳ್ಳಿ, ಮಂಜುನಾಥ ದಿವಟರ್, ಪ್ರವೀಣ ರೋಣದ,ಶಿವಪ್ಪ ಶೆಟ್ಟರ್, ಸುಮನ್ ಎಸ್. ಮಹ್ಮದ್ ಅಲೀಮುದ್ದೀನ್, ಶಿವನಗೌಡ ಪೋಲಿಸ್ ಪಾಟೀಲ್, ರಮೇಶ ಗುಡದಳ್ಳಿ, ಶಿವಾನಂದ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಗಳ ಅಧ್ಯಕ್ಷರು ಪದಾಧಿಕಾರಿಗಳು ಉಪಸ್ಥಿತರಿದ್ದರು.

ಹಿರಿಯ ಸಾಧಕರಾದ ಬಸವರಾಜ್ ಬಳ್ಳೊಳ್ಳಿ, ಶ್ರೀಮತಿ ಸಂಗೀತಾ ಕಲ್ಲೇಶರಿಗೆ ಆತ್ಮೀಯವಾಗಿ ಸನ್ಮಾನಿಸಲಾಯಿತು. 60 ಉತ್ತಮ ಶಿಕ್ಷಕ ಹಾಗೂ ಶಿಕ್ಷಕಿ ಪ್ರಶಸ್ತಿಯನ್ನು ಇದೇ ಸಂದರ್ಭದಲ್ಲಿ ವಿತರಿಸಲಾಯಿತು.ಎ.ಕೆ. ಮುಲ್ಲಾನವರ ಸ್ವಾಗತ ಕೋರಿದರೆ, ಸುರೇಶ ಕುಂಭಾರ ನಿರೂಪಣೆ ಮಾಡಿದರು. ಎಚ್.ವಿ.ರಾಜಾಭಕ್ಷಿಯವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ 60 ಕ್ಕೂ ಹೆಚ್ಚು ಶಾಲೆಯ ಆಡಳಿತ ಮಂಡಳಿ ಸದಸ್ಯರು, ಶಿಕ್ಷಕರು ಪಾಲ್ಗೊಂಡಿದ್ದರು.

> ಹಳೆ ಮೈಸೂರು ಭಾಗಗಳಿಗೆ ದಕ್ಷಿಣ ಕರ್ನಾಟಕದ ಜಿಲ್ಲೆಗಳಿಗೆ ಹೋಲಿಸಿದರೆ ನಮ್ಮ ಭಾಗ ಶೈಕ್ಷಣಿಕವಾಗಿ ಹಿಂದುಳಿದಿದೆ. ಸರ್ಕಾರ ಶಾಲೆಗಳಿಗೆ ಸಾಕಷ್ಟು ಸೌಲಭ್ಯಗಳನ್ನು ಒದಗಿಸಿದರೂ ಶೈಕ್ಷಣಿಕ ಪ್ರಗತಿ ಕಂಡುಬರುತ್ತಿಲ್ಲ ಇದು ಬದಲಾಗಬೇಕಿದೆ ಎಂದರು.

ಕಾಮಗಾರಿಗಳನ್ನು ಶೀಘ್ರವೇ ಪ್ರಾರಂಭಿಸಿ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಗ್ರಾಮಗಳಲ್ಲಿ ಸೂಕ್ತ ಚರಂಡಿ ವ್ಯವಸ್ತೆ, ನಿವೇಶನಗಳ ನಿರ್ಮಾಣ ಸೇರಿದಂತೆ ಗ್ರಾಮಗಳ ಸಮಸ್ಯೆಗಳನ್ನು ಪರಿಶೀಲಿಸಿ ಶೀಘ್ರವೇ ಕಾಮಗಾರಿ ಪ್ರಾರಂಭಿಸಿ ಎಂದು ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಭೀಮಪ್ಪ ಲಾಳಿ ಸೂಚಿಸಿದರು.

ತಾಲೂಕಿನ ಅರಸೀಕೆರೆ ಗ್ರಾಮ ಪಂಚಾಯಿತಿಯಲ್ಲಿ ಜಮಾಬಂದಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮಗಳಲ್ಲಿನ ಮುಖ್ಯ ಸಮಸ್ಯೆಗಳಾದ ರಸ್ತೆ

ನಿರ್ಮಾಣ, ದಿನವಹಿ ಸಂತೆ, ಆಟದ ಮೈದಾನ, ಕಸ ವಿಲೇವಾರಿ ಘಟಕ, ಕಚೇರಿಗಳಿಗೆ ವಾಹನದ ವ್ಯವಸ್ಥೆ ಹಾಗೂ 7.68 ಎಕರೆಯಲ್ಲಿ ಆಶ್ರಯ ಮನೆಗಳ ನಿರ್ಮಾಣ ಮಾಡಬೇಕು ಎಂದು ಸಂಬಂದಿಸಿದ ಅದಿಕಾರಿಗಳಿಗೆ ತಾಕೀತು ಮಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಎ.ಇನಾಯತ್‌ಉಲ್ಲಾ, ನರೇಗಾ ಸಹಾಯಕ ನಿರ್ದೇಶಕ ಸೋಮಶೇಖರ ವೈ. ಹೆಚ್, ಪಿಡಿಓ ಅಂಜಿನಪ್ಪ, ಮಂಜುನಾಥ, ಮಹಾಂತೇಶ್, ತಾಂತ್ರಿಕ ಸಂಯೋಜಕ ನಾಗರಾಜ್ ನಾಯ್ಕ, ಷಣ್ಮುಖಪ್ಪ, ಸಿ.ನಾಗರಾಜ ಮುಂತಾದವರಿದ್ದರು.

ಉಚಿತ ಆರೋಗ್ಯ ತಪಾಸಣೆ, ಚಿಕಿತ್ಸಾ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಿಲ್ಲಾ ಚಂದ್ರಸಾಲಿ ಗಜಾನ ಯುವಕ ಮಂಡಳಿ, ಲಾಯನ್ಸ್ ಕ್ಲಬ್, ಇಂಡಿಯನ್ ಮೆಡಿಕಲ್ ಅಸೋಸಿಯೇಶನ್, ಮಹಾವೀರ ಮೆಡಿಕಲ್, ಗೋಕುಲ್ ಫೌಂಡೇಶನ್ ಸಹಯೋಗದಲ್ಲಿ, 31ನೇ ವಾರ್ಡಿನ ನಗರಸಭಾ ಸದಸ್ಯರಾದ ಶೈಲಾ ಬಾಕಳೆಯವರ ಸಹಕಾರದೊಂದಿಗೆ ಸತತ 6ನೇ ವರ್ಷದ ಉಚಿತ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಲಾಯನ್ಸ್ ಕ್ಲಬ್ ಅಧ್ಯಕ್ಷ ನಿತೀಶ್ ಶಾಲಿ, ಕಾರ್ಯದರ್ಶಿಗಳಾದ ಆರ್.ಡಿ. ಪಾಟೀಲ, ಡಾ. ರೇಷ್ಮಾ ಪಾಟೀಲ, ಡಾ. ಚಂದ್ರಶೇಖರ ಬಳ್ಳಾರಿ, ಡಾ. ಕಾರ್ತಿಕ ಶಿವಪೂರ, ಡಾ. ಬೃಂದಾ ಶಿವಪೂರ, ನೇತ್ರತಜ್ಞರಾದ ಡಾ. ಸುನೀಲ್ ಮೆರವಾಡೆ, ಡಾ. ಸುಪ್ರಿಯಾ ಮೇರವಾಡೆ, ಡಾ. ಅಜಯ್ ಕುಮಾರ್, ಡಾ. ಗುರುಪ್ರಸಾದ, ಡಾ. ರಾಹುಲ್ ಕಲ್ಯಾಣ, ಡಾ. ರವಿಕುಮಾರ ಹಾಗೂ ಜಿಮ್ಸ್‌ನ ವೈದ್ಯಕೀಯ ಸಿಬ್ಬಂದಿಗಳ ತಂಡ ಪಾಲ್ಗೊಂಡು ವಿವಿಧ ರೋಗಗಳ ಪರೀಕ್ಷೆ ನಡೆಸಿ ಚಿಕಿತ್ಸೆ ನೀಡಿ ಆರೋಗ್ಯ ಕಾಪಾಡಿಕೊಳ್ಳುವಂತೆ ಸಲಹೆ ನೀಡಿದರು.

ನಗರದ ಮಹಾವೀರ್ ಮೆಡಿಕಲ್ ಸ್ಟೋರ್ ವತಿಯಿಂದ ಅವಶ್ಯಕತೆ ಇರುವವರಿಗೆ ಉಚಿತ ಔಷಧಿ ವಿತರಿಸಲಾಯಿತು. ಲಯನ್ಸ್ ಕ್ಲಬ್ ಸದಸ್ಯರಾದ ದತ್ತುಸಾ ಮೇರವಾಡೆ ಮಾತನಾಡಿ, ಸತತ 6 ವರ್ಷಗಳಿಂದ ಈ ಅರ್ಥಪೂರ್ಣ ಕಾರ್ಯಕ್ರಮ ಹಮ್ಮಿಕೊಳ್ಳುತ್ತಾ ಬರಲಾಗಿದ್ದು, ವಿವಿಧ ಸಂಘ-ಸಂಸ್ಥೆಗಳ ಹಾಗೂ ಸಾರ್ವಜನಿಕರ ಸಹಕಾರದಿಂದ ಮುಂದಿನ ದಿನಗಳಲ್ಲೂ ಆರೋಗ್ಯ ಶಿಬಿರದಂಥ ಕಾರ್ಯಕ್ರಮ ನೆರವೇರಿಸುವುದಾಗಿ ತಿಳಿಸಿದರು.

ನಗರಸಭೆ ಸದಸ್ಯರಾದ ಶೈಲಾ ಬಾಕಳೆ, ಗೋಕುಲ್ ಫೌಂಡೇಶನ್ ಅಧ್ಯಕ್ಷ ಸುಧೀರ ಕಾಟಿಗಾರ ಮಾತನಾಡಿದರು. ಲಾಯನ್ಸ್ ಕ್ಲಬ್‌ನ ಲಿಂಗರಾಜ ತೋಟದ, ಡಾ. ಕಂಬಾರ, ಅರುಣ ಮಿಸ್ಕಿನ್, ಸ್ಯಾಮ್ ಮಿಸ್ಕಿನ್, ಮಂಜುನಾಥ ವೀರಲಿಂಗನಮಠ, ಅಶ್ವಿನಿ ಮಂದಾಲ್, ಗಜಾನನ ಸಮಿತಿ ಅಧ್ಯಕ್ಷರಾದ ಶ್ರೀಕಾಂತ ಪವಾರ್, ಪರಶುರಾಮಸಾ ಬದಿ, ಕೃಷ್ಣಾಸಾ ಲದ್ವಾ, ಪರಶುರಾಮ ಮಿಸ್ಕಿನ, ಮನೋಹರ ದಲಬಂಜನ, ಪ್ರಕಾಶ ಕಾಟಿಗಾರ, ರವಿ ಚವ್ಹಾಣ, ವಂಸತ ಬಾಕಳೆ, ರಾಜೇಶ ಖೋಡೆ, ರಾಹುಲ್ ಚೌಹಾಣ ಮುಂತಾದವರಿದ್ದರು. ಪ್ರವೀಣ ವಾರಕರ ನಿರೂಪಿಸಿದರು.

ದಲಿತರ ಮೇಲಿನ ದೌರ್ಜನ್ಯ ತಡೆಗೆ ಸಂಗನಹಾಲ ಚಲೋ

ಬೃಹತ್ ಕಾಲ್ನಡಿಗೆ ಜಾಥಾ

■ ವಿವಿಧ ಸಂಘಟನೆಗಳ ಬೆಂಬಲ ■ ಸಮಾನ ಬದುಕಿನತ್ತ ಅರಿವಿನ ಜಾಥಾಕ್ಕೆ ಜೊತೆಯಾದ ಸಾವಿರಾರು ಹೆಜ್ಜೆ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲೆಯಲ್ಲಿ ನಿರಂತರ ದಲಿತರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ವಿರೋಧಿಸಿ ದಲಿತ ಪರ ಸಂಘಟನೆಗಳು ಹಾಗೂ ಕೊಪ್ಪಳದ ವಿವಿಧ ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ ಆರಂಭಗೊಂಡಿರುವ ಸಂಗನಹಾಲ ಚಲೋ ಕಾಲ್ನಡಿಗೆ ಜಾಥಾಕ್ಕೆ ಸಾವಿರಾರು ಹೆಜ್ಜೆಗಳು ಜೊತೆಯಾದವು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಿಂದ ಮಂಗಳವಾರ ಆರಂಭಗೊಂಡ ಸಂಗನಾಳ ಚಲೋ ಜಾಥಾಕ್ಕೆ ಹೋರಾಟ ಗಾರರು ಸಾಮೂಹಿಕ ವಾಗಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹೋರಾಟಗಾರ ಅಂಬಣ್ಣ ಆರೋಲಿಕರ್, ಈ ಹಿಂದೆ ಸಹ ಇಡೀ ರಾಜ್ಯಾದ್ಯಂತ ವಿವಿಧ ಕಡೆ ದಲಿತರ ಮೇಲೆ ದೌರ್ಜನ್ಯಗಳು ನಡೆಯುತ್ತಿದ್ದವು. ಆ ಸಂದರ್ಭದಲ್ಲಿ ಪೊಲೀಸ್ ಅಧಿಕಾರಿಗಳು ಆಯಾ ಗ್ರಾಮಕ್ಕೆ ಭೇಟಿ ನೀಡಿ ಇದರ ವಿರುದ್ಧ ಕಟ್ಟುನಿಟ್ಟಾದ ಕ್ರಮವನ್ನು

ಕೈಗೊಳ್ಳುತ್ತಿದ್ದರು. ಘಟನೆಗಳಿಗೆ ಕಾರಣಿ ಕರ್ತರಾದವರ ವಿರುದ್ಧ ಸಾಕಷ್ಟು ಕಾನೂನು ಕ್ರಮ ಜರುಗಿಸಲಾಗುತ್ತಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಈ ರೀತಿ ಕಟ್ಟುನಿಟ್ಟಾಗಿ ಕಾನೂನು ಕ್ರಮ ಜರಗಿಸುವ ಮತ್ತು ಕಾನೂನಿನ ಕುರಿತು ಭಯ ಇರುವಂತೆ ನೋಡಿಕೊಳ್ಳುವ ಅಧಿಕಾರಿಗಳ ಸಂಖ್ಯೆ ಕಡಿಮೆಯಾಗಿದೆ. ಈ ಕಾರಣಕ್ಕಾಗಿಯೇ ಈಗಲೂ ಸಹ ದಲಿತರ ಮೇಲೆ ದೌರ್ಜನ್ಯಗಳು ನಡೆಯುತ್ತಿವೆ ಎಂದು ಹೇಳಿದರು.

ದಲಿತರ ಮೇಲೆ ದೌರ್ಜನ್ಯಗಳು ಈ ಹಿಂದಿಗಿಂತ ಈ ಕಾಲದಲ್ಲಿ ಹೆಚ್ಚಾಗಿವೆ, ಇದನ್ನು ಕಾನೂನಿನ ಮೂಲಕವೇ ಕಟ್ಟುನಿಟ್ಟಾಗಿ ತಡೆಗಟ್ಟಬೇಕಿದೆ. ಕಾನೂನನ್ನು ಸಮರ್ಪಕವಾಗಿ ಜಾರಿಗೊಳಿಸುವ ಕಟ್ಟುನಿಟ್ಟಾದ ಅಧಿಕಾರಿಗಳ ಅವಶ್ಯಕತೆ ಇದೆ. ಯಾವುದೇ ರೀತಿಯ ಒತ್ತಡಗಳಿಗೆ ಮಣಿಯದೆ ಕಾನೂನು ಕ್ರಮ ಕೈಗೊಂಡರೆ ಖಂಡಿತವಾಗಿಯೂ ದೌರ್ಜನ್ಯ ಪ್ರಕರಣಗಳು ಕಡಿಮೆಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಹೋರಾಟಗಾರ ಅಲ್ಲಮ ಪ್ರಭು ಬೆಟ್ಟದೂರು ಮಾತನಾಡಿ, ಈ ರೀತಿಯ ಘಟನೆಗಳು ಸಂಭವಿಸಿದಾಗ ಜಿಲ್ಲಾಮಟ್ಟದ ಅಧಿಕಾರಿಗಳು ಆ ಗ್ರಾಮಕ್ಕೆ ತೆರಳಿ ಕೂಲಂಕುಶವಾಗಿ ಪರಿಶೀಲನೆ ನಡೆಸಬೇಕು ಹಾಗೂ ಅದಕ್ಕೆ ಕಾರಣರಾದವರ ವಿರುದ್ಧ ಕಟ್ಟುನಿಟ್ಟಾದ ಕ್ರಮವನ್ನು ಜರುಗಿಸಬೇಕು. ಮತ್ತೊಮ್ಮೆ ಈ ರೀತಿಯ ಪ್ರಕರಣಗಳು ಮರುಕಳಿಸದಂತೆ ನೋಡಿಕೊಳ್ಳಬೇಕು ಈ ರೀತಿ ಆದಾಗ ದೌರ್ಜನ್ಯ ಪ್ರಕರಣಗಳು ಕಡಿಮೆಯಾಗುತ್ತವೆ ಇಲ್ಲವಾದಲ್ಲಿ ಇದು ನಿರಂತರವಾಗಿ ನಡೆಯುತ್ತಲೇ ಇರುತ್ತವೆ ಎಂದು ಹೇಳಿದರು.

ಮೊದಲ ದಿನದ ಕಾಲ್ನಡಿಗೆ ಜಾಥಾವು ಜಿಲ್ಲಾಧಿಕಾರಿಗಳ ಕಚೇರಿಯಿಂದ ತೆರಳಿ ಭಾನಾಪುರವನ್ನು ತಲುಪಿತು. ಬೆಳಿಗ್ಗೆಯಿಂದ ಸಂಗನಾಳ್ ಅವರಿಗೆ ಕಾಲ್ನಡಿಗೆ ಜಾಥಾ ನಡೆಯಲಿದೆ. ಜಾಥಾದಲ್ಲಿ ಕೊಪ್ಪಳದ ವಿವಿಧ ಪ್ರಗತಿಪರ ಸಂಘಟನೆಗಳು ಭಾಗಿಯಾಗಿವೆ.

ಈ ಸಂದರ್ಭದಲ್ಲಿ ಹೋರಾಟಗಾರರಾದ ಟಿ ರತ್ನಾಕರ್, ಶುಕ್ರಜ ತಾಲ್ಕೇರಿ, ಸಂಘಟಕರಾದ ಬಸವರಾಜ ಸೂಳಿಭಾವಿ, ಮುತ್ತು ಬಿಳಿಯಲಿ, ಶ್ರೀಪಾದ ಭಟ್, ಶಶಿಕಲಾ ಮಠ, ಸಲೀಮಾ ಜಾನ, ಜನಾರ್ಧನ್, ಎಂ ಆರ್ ಬೇರಿ, ಗೌರಿ ಗೋನಾಳ, ಮರಿಯಮ್ಮ, ಆನಂದ ಶಿಂಗಾಡಿ, ಖಾಸೀಮ್ ಸರ್ದಾರ, ಡಿ. ಎಂ.ಬಡಿಗೇರ್, ಡಿ ಹೆಚ್ ಪೂಜಾರ್, ಕರ್ನಾಟಕ ಮುಸ್ಲಿಂ ಯುನಿಟಿ ಸಂಚಾಲಕ ನಜೀರ್ ಮೂಲಿಮನಿ, ಕರ್ನಾಟಕ ಮುಸ್ಲಿಂ ಯುನಿಟಿ ಜಿಲ್ಲಾಧ್ಯಕ್ಷ ಎಂ.ಡಿ. ಜೀಲಾನ್ ಕಿಲ್ಲೇದಾರ್, ಮುತ್ತು ಹಾಲಕ

ನರೇಗಾ ವೈಯಕ್ತಿಕ ಕಾಮಗಾರಿ ವಿತರಣಾ ಅಭಿಯಾನದಲ್ಲಿ ಎಸ್.ಕೆ. ಇನಾಮದಾರ

ನರೇಗಾ ಯೋಜನೆಯಡಿ ಸ್ವಾವಲಂಬಿಗಳಾಗಿ

■ ವಿಜಯಸಾಕ್ಷಿ ಸುದ್ದಿ, ನರಗುಂದ

ಗ್ರಾಮೀಣ ಪ್ರದೇಶದ ಕೂಲಿಕಾರರು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ವೈಯಕ್ತಿಕ ಕಾಮಗಾರಿಗಳಿಗೆ ಆರ್ಥಿಕ ನೆರವು ಪಡೆದು ಜೀವನ ರೂಪಿಸಿಕೊಳ್ಳಬೇಕು. ಕೂಲಿಕಾರರ ಜೀವನ ಮಟ್ಟ ಸುಧಾರಿಸುವ ಕಾಮಗಾರಿಗಳು ಯೋಜನೆಯಡಿ ಲಭ್ಯವಿದ್ದು, ಗ್ರಾಮ ಪಂಚಾಯತ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆದು ಯೋಜನೆಯ ಲಾಭವನ್ನು ಪಡೆದುಕೊಳ್ಳಿ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಸ್.ಕೆ. ಇನಾಮದಾರ ಹೇಳಿದರು.

ಕೊಣ್ಣೂರು ಗ್ರಾ.ಪಂ ಕಚೇರಿ ಆವರಣದಲ್ಲಿ ಜರುಗಿದ ನರೇಗಾ ಯೋಜನೆಯ ವೈಯಕ್ತಿಕ ಕಾಮಗಾರಿಗಳ ವಿತರಣಾ ಅಭಿಯಾನಕ್ಕೆ ಚಾಲನೆ ನೀಡುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಉದ್ಯೋಗ ಖಾತ್ರಿ ಯೋಜನೆಯಲ್ಲಿ ವರ್ಷಕ್ಕೆ 100 ದಿನಗಳವರೆಗೆ ಕೂಲಿಕಾರರಿಗೆ ಕೆಲಸ ನೀಡಲಾಗುತ್ತಿದೆ. ಉದ್ಯೋಗ ಚೀಟಿ ಪಡೆದ ಕುಟುಂಬ ವರ್ಗ ವರ್ಷಕ್ಕೆ 100 ದಿನ ಕೆಲಸ ಮಾಡಿದರೆ ವಾರ್ಷಿಕವಾಗಿ ಯೋಜನೆಯಡಿ 34800 ರೂ. ಪಡೆಯುತ್ತಾರೆ.

ಯೋಜನೆಯಡಿ ಅರ್ಹ ಫಲಾನುಭವಿಗಳು ದನದ ಕೊಟ್ಟಿಗೆ, ಬಚ್ಚಲು ಗುಂಡಿ, ಕೋಳಿ ಶೆಡ್, ಕೃಷಿ ಹೊಂಡ ಕಾಮಗಾರಿ ಮಾಡಿಕೊಳ್ಳಲು ಸಾಧ್ಯವಿದೆ. ತೆ-ಲೋಟಗಾರಿಕೆ ಇಲಾಖೆಯಡಿ ಬೆಳೆಗಳಾದ ತೆಂಗು, ಮಾವು, ದಾಳಿಂಬೆ, ಸೀಬೆ, ಗುಲಾಬಿ, ಮಲ್ಲಿಗೆ, ಬಾಳೆ ಮತ್ತು ಪಪ್ಪಾಯಿ ಸೇರಿದಂತೆ ವಿವಿಧ ಬೆಳೆಗಳನ್ನು ಆರ್ಥಿಕ ನೆರವು ಪಡೆದು ಬೆಳೆದುಕೊಳ್ಳಬಹುದು ಎಂದರು.

ಗಂಡು ಮತ್ತು ಹೆಣ್ಣು ಕೂಲಿಕಾರರಿಗೆ ಸಮಾನವಾಗಿ 349 ರೂಪಾಯಿ ದಿನವೊಂದಕ್ಕೆ ಯೋಜನೆಯಡಿ ಕೂಲಿ ಮೊತ್ತ ನೀಡಲಾಗುತ್ತದೆ. ಕೂಲಿಕಾರರ ಕೇಂದ್ರಬಿಂದುವಾಗಿರುವ ನರೇಗಾ ಯೋಜನೆಯು ಗ್ರಾಮೀಣ ಕೂಲಿಕಾರರಿಗೆ ಕೈತುಂಬ ಉದ್ಯೋಗ ನೀಡುವ ಕಾರ್ಯವನ್ನು ಮಾಡುತ್ತಿದೆ. ಮಹಿಳೆಯರು ಮತ್ತು ವಿಶೇಷಚೇತನರಿಗೆ ಯೋಜನೆಯಡಿ ಕೆಲಸದಲ್ಲಿ ವಿಶೇಷ ರಿಯಾಯತಿ ಇದೆ. ಕೂಲಿಕಾರರಿಗೆ ಇರುವ ಸೌಲಭ್ಯಗಳನ್ನು ಯೋಜನೆಯಡಿ ಪಡೆದುಕೊಂಡು ಗ್ರಾಮೀಣ ಪ್ರದೇಶದ ಕೂಲಿಕಾರರು ಕೆಲಸದ ಸಲುವಾಗಿ ಬೇರೆ ಸ್ಥಳಕ್ಕೆ ಹೋಗದೇ ಇದ್ದೂರಲ್ಲೇ ನರೇಗಾದಲ್ಲಿ ಕೆಲಸ ಮಾಡಿ ಎಂದು ತಿಳಿಸಿದರು.

ವೈಯಕ್ತಿಕ ಕಾಮಗಾರಿಗಳ ವಿತರಣಾ ಮೇಳಕ್ಕೆ

> ಕೊಣ್ಣೂರು ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಮಂಜುನಾಥ ಗಣಿ ಮಾತನಾಡಿ, ವೈಯಕ್ತಿಕ ವಿತರಣಾ ಮೇಳ ಅಭಿಯಾನದ ಮೂಲಕ ಹೊಸ ಉದ್ಯೋಗ ಚೀಟಿ ಪಡೆದ ಕುಟುಂಬಗಳಿಗೆ ವೈಯಕ್ತಿಕ ಕಾಮಗಾರಿಗಳನ್ನು ಪಡೆದುಕೊಳ್ಳುವಂತೆ ಪ್ರಚಾರ ಮಾಡುತ್ತಿದ್ದೇವೆ. ಯೋಜನೆಯಡಿ ಇರುವ ವಿವಿಧ ಕಾಮಗಾರಿಗಳನ್ನು ಪಡೆದುಕೊಳ್ಳಲು ಇಚ್ಛಿಸುವ ಕೂಲಿಕಾರರು ಗ್ರಾ.ಪಂ ಕಚೇರಿಗೆ ಬಂದು ಬೇಡಿಕೆ ಸಲ್ಲಿಸಬಹುದು ಎಂದು ಹೇಳಿದರು.

ಕೊಣ್ಣೂರು ಗ್ರಾ.ಪಂ ಅಧ್ಯಕ್ಷೆ ಸಿದ್ದವ್ವ ಕಳಸಣ್ಣವರ ಹಾಗೂ ಉಪಾಧ್ಯಕ್ಷ ಶಂಕರಗೌಡ ಪಾಟೀಲ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾ.ಪಂ ಸದಸ್ಯರಾದ ಮಮತಾಜ್ ಬೇಗಂ ಕುರ್ಲಗೇರಿ, ಹುಸೇನಬೀ ಬುರುಡಿ, ಜ್ಯೋತಿ ವಾಸನ, ಹನಮಂತಪ್ಪ ಚಿನ್ನಾರ್, ಕೆ.ಟಿ. ಚವ್ಹಾಣ ಭಾಗವಹಿಸಿದ್ದರು. ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಸಂಜೀವಿನಿ ಮಹಿಳಾ ಒಕ್ಕೂಟದ ಸದಸ್ಯರು ಮತ್ತು ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಹಾಜರಿದ್ದರು.

ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಗದಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಸೆ.20ರ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ ಜಿಮ್ಸ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿಪಿ-ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿ ಎಲ್ 1, ಮತ್ತು 2, 33 ಕೆವಿ ಉಪಕೇಂದ್ರ-ಹುಲಕೋಟಿ, ಲಕ್ಕುಂಡಿ, ಕೆ.ಎಚ್.ಬಿ ಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ, ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

ಸಮಾಜದ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮಾಜದ ಅಭಿವೃದ್ಧಿಗಾಗಿ ಸಹಕಾರಿ ಸಂಘಗಳು ಕೊಡುಗೆ ನೀಡುತ್ತಿವೆ ಎಂದು ಬಾಲಲೀಲಾ ಮಾಹಾಂತ ಶಿವಯೋಗಿಗಳ ಬಣಜಿಗರ ಪತ್ತಿನ ಸಂಘ ನಿಯಮಿತದ ಅಧ್ಯಕ್ಷ ಬಿ.ಎಂ. ವಾಲಿ ಹೇಳಿದರು.

ಅವರು ಸಂಘದ 14ನೇ ವರ್ಷದ ವಾರ್ಷಿಕ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂಘದ ಪ್ರತಿಯೊಬ್ಬರ ಸಹಾಚಿ-ಸಹಕಾರದಿಂದ ಸಂಘ ಅಭಿವೃದ್ಧಿಯತ್ತ ಸಾಗುತ್ತಿದ್ದು, ಸಂಘದ ಅಭಿವೃದ್ಧಿಯ ಜೊತೆಯಲ್ಲಿ ಸಮಾಜದ ಪ್ರತಿಯೊಬ್ಬ ಸದಸ್ಯರು ಆರ್ಥಿಕವಾಗಿ ಸಬಲರಾಗಿ, ಸಮಾಜ ಅಭಿವೃದ್ಧಿ ಹೊಂದಬೇಕು ಎಂದರು.

ಉಪಾಧ್ಯಕ್ಷ ಸಿದ್ದಲಿಂಗೇಶ ಕುರ್ತಕೋಟಿ ಮಾತನಾಡಿ, ಸಮಾಜದ ಪ್ರತಿಯೊಬ್ಬರೂ ಸದಸ್ಯತ್ವವನ್ನು ಪಡೆದುಕೊಂಡು ಸಂಘದ ಅಭಿವೃದ್ಧಿಯ ಜೊತೆಯಲ್ಲಿ ಸಮಾಜದ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಬೇಕು. ಸಂಘವು ಕ್ರಿಯಾತ್ಮಕವಾಗಿ ಕೆಲಸ ಮಾಡುತ್ತಿದ್ದು, ಸಂಘದ ಪ್ರಯೋಜನವನ್ನು ಪಡೆದುಕೊಳ್ಳಬೇಕು ಎಂದರು.

ಸಂಘದ ಆಡಳಿತಾಧಿಕಾರಿ ಎಸ್.ಆರ್. ನಾಯಕ ಹಾಗೂ ಮುಖ್ಯ ಕಾರ್ಯನಿರ್ವಾಹಕ ಎಂ.ಎಂ. ಶೇಖ ವರದಿ ವಾಚನ ಮಾಡಿದರು. ಪ್ರಭಣ್ಣಾ ಕೋರಿ, ಅಜ್ಜಪ್ಪ ಮೆಣಸಿನಕಾಯಿ, ಈಶ್ವರಪ್ಪ ಮುನವಳ್ಳಿ, ಪಂಚಾಕ್ಷರಪ್ಪ ಅಂಗಡಿ, ಸುನೀಲ ವಾಲಿ, ಲಲಿತಾ ಶೆಟ್ಟರ, ನೇತ್ರಾವತಿ ಕತ್ತಿ, ಈಶಪ್ಪ ಮ್ಯಾಗೇರಿ, ಮಾಹಾಂತೇಶ ಕೋರಿ, ರಮೇಶ ಮಜ್ಜಿಗುಡ್ಡ ಹಾಗೂ ಸಮಾಜದ ಮುಖಂಡರು ಇದ್ದರು.

ಸ್ವಚ್ಛತಾ ಹಿ ಸೇವಾ ಕಾರ್ಯಕ್ರಮದಲ್ಲಿ ತಾ.ಪಂ ಇಓ ಇನಾಮದಾರ ಕರೆ

ಕಡ್ಡಾಯ ಶೌಚಾಲಯ ಬಳಕೆಗೆ ಪಣತೊಡಿ

■ ವಿಜಯಸಾಕ್ಷಿ ಸುದ್ದಿ, ನರಗುಂದ

ಗ್ರಾಮೀಣ ಪ್ರದೇಶಗಳಲ್ಲಿ ಶುಚಿತ್ವ ಕಾಪಾಡಬೇಕಾದರೆ ಪ್ರತಿಯೊಂದು ಮನೆಯೂ ಕಡ್ಡಾಯವಾಗಿ ಶೌಚಾಲಯ ನಿರ್ಮಿಸಿಕೊಳ್ಳಬೇಕು. ಸ್ವಚ್ಛ ಭಾರತ್ ಯೋಜನೆ ಹಾಗೂ ನರೇಗಾ ಯೋಜನೆಯಡಿ ಪ್ರತಿ ಮನೆಗೆ ಶೌಚಾಲಯ ನಿರ್ಮಾಣಕ್ಕೆ ಗ್ರಾ.ಪಂ ಕ್ರಮ ಕೈಗೊಳ್ಳುತ್ತಿದೆ. ಇದರ ಸದುಪಯೋಗ ಪಡೆದುಕೊಂಡು ಗ್ರಾಮವನ್ನು ಸ್ವಚ್ಛವಾಗಿಟ್ಟುಕೊಂಡಾಗ ಮಹಾತ್ಮ ಗಾಂಧೀಜಿಯವರು ಕಂಡ ಗ್ರಾಮ ಸ್ವರಾಜ್ ಕನಸು ಈಡೇರುತ್ತದೆ ಎಂದು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಕೆ. ಇನಾಮದಾರ ಹೇಳಿದರು.

ಜಿಲ್ಲಾ ಪಂಚಾಯಿತಿ, ನರಗುಂದ ತಾಲೂಕು ಪಂಚಾಯಿತಿ ಹಾಗೂ ಕನಕೀಕೊಪ್ಪ ಗ್ರಾ.ಪಂ ಸಂಯುಕ್ತಾಶ್ರಯದಲ್ಲಿ ಗ್ರಾಮದ

ಎನ್.ಸಿ.ಕೆ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಡಿದರು.

ಗ್ರಾಮೀಣ ಪ್ರದೇಶದಲ್ಲಿ ಅಗತ್ಯಕ್ಕೆ ತಕ್ಕಷ್ಟು ಮಾತ್ರ ನೀರನ್ನು ಬಳಕೆ ಮಾಡಬೇಕು. ನೀರನ್ನು ಪೋಲು ಮಾಡಿ ಹರಿಬಿಡುವುದರಿಂದ ಗ್ರಾಮದ ವಾತಾವರಣ ಮಲಿನತೆಗೆ ಕಾರಣವಾಗುತ್ತದೆ. ಇದರಿಂದ ಗ್ರಾಮದಲ್ಲಿ ಕೀಟಾಣುಗಳು ಉತ್ಪತ್ತಿಯಾಗಿ ಸಾಂಕ್ರಾಮಿಕ ರೋಗ ಹರಡಿ ಪರಿಸರ ಮಾಲಿನ್ಯ ಉಂಟಾಗುತ್ತದೆ. ನೀರನ್ನು ಮಿತವಾಗಿ ಬಳಸಿ, ಮಲ ವಿಸರ್ಜನೆಗೆ ಮನೆಯಲ್ಲಿ ಕಡ್ಡಾಯವಾಗಿ ಶೌಚಾಲಯವನ್ನು ನಿರ್ಮಿಸಿಕೊಳ್ಳಿ ಎಂದರು.

ಅಂಗನವಾಡಿ ಕಾರ್ಯಕರ್ತೆ

> ತಾ.ಪಂ ಸಹಾಯಕ ನಿರ್ದೇಶಕರಾದ ಕೃಣ್ಣಮ್ಮ ಹಾದಿಮನಿ ಮಾತನಾಡಿ, ಸ್ವಚ್ಛತಾ ಹಿ ಸೇವಾ ಆಂದೋಲನವನ್ನು ಪ್ರತಿ ವರ್ಷದಂತೆ ಈ ವರ್ಷವೂ ಆಚರಣೆ ಮಾಡುತ್ತಿದ್ದು, ನಿರಂತರವಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 15 ದಿನಗಳ ಕಾಲ ಸ್ವಚ್ಛತಾ ದೃಷ್ಟಿಯಿಂದ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಶಾಲಾ ಮಕ್ಕಳಲ್ಲೂ ಶುಚಿತ್ವದ ಜಾಗೃತಿಗಾಗಿ ಸ್ಪರ್ಧೆಗಳನ್ನು ಏರ್ಪಡಿಸಲಾಗುತ್ತಿದೆ ಎಂದು ತಿಳಿಸಿದರು.

ಶಾರದಾ ಹಳೇಮನಿ ಮತ್ತು ಸಮುದಾಯ ಆರೋಗ್ಯಾಧಿಕಾರಿ ರವಿ ವಾಲ್ಮೀಕಿ ಮಾತನಾಡಿ, ವೈಯಕ್ತಿಕ ಸ್ವಚ್ಛತೆ ಹಾಗೂ ಶುಚಿತ್ವದಿಂದ ಕೈ ತೊಳೆಯುವ ವಿಧಾನದ ಬಗ್ಗೆ ಶಾಲಾ ಮಕ್ಕಳಲ್ಲಿ ತಿಳುವಳಿಕೆ ಮೂಡಿಸಿದರು.

ಕಾರ್ಯಕ್ರಮ ಬಳಿಕ ಶಾಲಾ ಮಕ್ಕಳಿಗೆ ಮತ್ತು ಕಾರ್ಯಕ್ರಮದಲ್ಲಿ ಅಧಿಕಾರಿಗಳಿಗೆ ಹಾಗೂ ಜನಪ್ರತಿನಿಧಿಗಳಿಗೆ ಶುಚಿತ್ವಕ್ಕಾಗಿ ಪ್ರತಿಜ್ಞಾವಿಧಿಯನ್ನು ತಾ.ಪಂ ಐಇಸಿ ಸಂಯೋಜಕ ಸುರೇಶ ಬಾಳಿಕಾಯಿ ಬೋಧಿಸಿದರು.

ಗ್ರಾ.ಪಂ ಉಪಾಧ್ಯಕ್ಷರಾದ ಎಸ್.ಎ.ಬಡಿಗೇರ, ಸದಸ್ಯರಾದ ಎಮ್.ಎಸ್.ದೊಡಮನಿ, ಕನಕರೆಡ್ಡಿ ಗಿರಡ್ಡಿ, ವೆಂಕಮ್ಮ ಮಾದರ, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ರಮೇಶಗೌಡ ರಾಯನಗೌಡರ, ಮುಖ್ಯೋಪಾಧ್ಯಾಯರಾದ ಎಸ್.ಪಿ. ಹಿರೇಮನಿ, ಗ್ರಾ.ಪಂ ಸಿಬ್ಬಂದಿ ವರ್ಗ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಸಂಜೀವಿನಿ ಒಕ್ಕೂಟದ ಮಹಿಳಾ ಸದಸ್ಯರು ಭಾಗವಹಿಸಿದ್ದರು.

10ನೇ ವಾರ್ಷಿಕೋತ್ಸವ : ಸಾಧಕರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮೊಹಮ್ಮದೀಯ ಸೋಶಿಯಲ್ ವೆಲ್ಫೇರ್ & ಎಜ್ಯುಕೇಶನ್ ಟ್ರಸ್ಟ್ ಮುಳಗುಂದ ಇದರ 10ನೇ ವಾರ್ಷಿಕೋತ್ಸವ ಹಾಗೂ ಸೀರತೆ ನಬಿ(ಸ್ವ.ಸ) ಪ್ರಯುಕ್ತ ಅಂಜುಮನ್ ಇಸ್ಲಾಂ ಕಮಿಟಿ ಮುಳಗುಂದ ಸದಸ್ಯರಿಗೆ, 13ನೇ ವಯಸ್ಸಿಗೆ ಹಾಫೀಸ್ ಆದ ಹಾಫೀಸ್ ಸೈಫ್‌ಅಲಿ ಲಕ್ಕುಂಡಿ ಮತ್ತು ಮೌಲಾನಾ ಶಮಶುದ್ದಿನ, ಅಂಜುಮನ್ ಕಮಿಟಿಯ ಅಧ್ಯಕ್ಷ ತಾಜುದ್ದೀನ ಕಿಂಡ್ರಿ, ಉಪಾಧ್ಯಕ್ಷ ಅಬ್ದುಲ್ ಹಮೀದ ಮುಜಾವರ, ಕಾರ್ಯದರ್ಶಿ ಹೈದರ್ ಅಲಿ ಖವಾಸ್, ಖಜಾಂಚಿ ಮುನ್ನಾ ಡಾಲಾಯತ್, ಚಾಂದ್ ಕಮಿಟಿ ಅಧ್ಯಕ್ಷರಾದ ಎಂ.ಎ. ಖಾಜಿ, ಜನಾಬ ಲಾಲಶ್ಯಾ ಪೀರ್ ಮಕಾನದಾರ್, ಅಂಜುಮನ್ ಮಾಜಿ ಅಧ್ಯಕ್ಷ ಇಮಾಮಸಾಬ ಶೇಖ, ಅಲ್ಲಾಭಕ್ಷ ಹೊಂಬಳ,

ದಾವೂದ್ ಜಮಾಲಸಾಬನವರ್, ದಾವಲ್ ಸಾಬ ಲಕ್ಷ್ಮೇಶ್ವರ, ಜಾಮೀಂಯಾ ಮಸ್ಜಿದ್ ಸದಸ್ಯರಾದ ಇಮಾಮಹುಸೇನ ನದ್ದಿಮುಲ್ಲಾ, ಖಾದರಬಾಷಾ ಸದರಭಾವಿ ಅವರನ್ನು ಸನ್ಮಾನಿಸಲಾಯಿತು.

ಟ್ರಸ್ಟ್‌ನ ಅಧ್ಯಕ್ಷ ಅಬ್ದುಲ ಮುನಾಫ್ ಸಿದ್ದಿ, ಉಪಾಧ್ಯಕ್ಷ ಹಾಜಿ ದಸ್ತಗಿರಸಾಬ ಸದರಭಾವಿ, ಕಾರ್ಯದರ್ಶಿ ಹಾಜಿ ಖ್ವಾಜಾಅಮೀರ್ ಶೇಖ, ಖಜಾಂಚಿ ಹಾಜಿ ಸಲೀಂಜಾವೇದ ಮುಲ್ಲಾ, ಸದಸ್ಯರಾದ ಮಹಮ್ಮದ್ ಶಫಿ ಶೇಖ, ಹಾಜಿ ಲಿಯಾಕತ್‌ಅಲಿ ಶೇಖ, ಅಂಜುಮನ್ ಮಾಜಿ ಸದಸ್ಯರಾದ ಇಸ್ಮಾಯಿಲ್ ಸದರಭಾವಿ, ಅಬ್ದುಲ್ ಖಾದರ್ ಚಿತವಾಡಗಿ, ಇಬ್ರಾಹಿಮಸಾಬ ಸದರಭಾವಿ, ಅನ್ವರ ಶೇಖ, ಆರೀಫ್ ಶೇಖ, ಇಸ್ಮಾಯಿಲ್ ನದಾಫ್, ಅಲ್ತಾಫ ಶೇಖ, ತೌಸಿಫ್ ಸಿದ್ದಿ, ತೌಸಿಫ ಶೇಖ, ಶಾಬಾಜ್ ಸಿದ್ದಿ, ಅಬ್ಬು ಸಿದ್ದಿ, ಜಾಫರ್ ಸಿದ್ದಿ, ಜಾಕೀರ ಸಿದ್ದಿ, ಮಹಮ್ಮದ್ ರಫಿ ಸದರಭಾವಿ ಹಾಜರಿದ್ದರು.

ಕಾರ್ಯಕ್ರಮವನ್ನು ಮೊಹಮ್ಮದ್ ಗೌಸ್ ಜಮಾಲಸಾಬವರ ನಿರೂಪಿಸಿದರು.

ಪೌರ ಕಾರ್ಮಿಕರಿಗೆ ಆರೋಗ್ಯದೆಡೆ ಗಮನವಿರಲಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮನೆಯ ಸ್ವಚ್ಛತೆಗೆ ಆದ್ಯತೆ ನೀಡಿದಂತೆ, ಮನೆಯಂಗಳದ ಸ್ವಚ್ಛತೆಗೆ ಪ್ರತಿಯೊಬ್ಬರೂ ಮುಂದಾದರೆ ಅದೇ ನಾವು ಪೌರಕಾರ್ಮಿಕರಿಗೆ ನೀಡುವ ಗೌರವವಾಗಿದೆ ಎಂದು ಸಾಯಿದತ್ತಾ ಮಲ್ಟಿ ಸ್ಪೆಶಾಲಿಟಿ ಆಸ್ಪತ್ರೆಯ ವೈದ್ಯಾಧಿಕಾರಿ ಆರ್.ಎಸ್. ಜೀರೆ ಹೇಳಿದರು.

ಪಟ್ಟಣದ ಸಾಯಿದತ್ತಾ ಮಲ್ಟಿ ಸ್ಪೆಶಾಲಿಟಿ ಆಸ್ಪತ್ರೆಯಲ್ಲಿ ಮಂಗಳವಾರ ಪುರಸಭೆಯಿಂದ ನಡೆದ ಪೌರ ಕಾರ್ಮಿಕರ ಆರೋಗ್ಯ ತಪಾಸಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಳೆ, ಗಾಳಿ, ಬಿಸಿಲು ಲೆಕ್ಕಿಸಿದೆ, ಹಬ್ಬ ಹರಿದಿನಗಳನ್ನೂ ಬದಿಗೊತ್ತಿ ಸಾರ್ವಜನಿಕರ ಆರೋಗ್ಯ ರಕ್ಷಣೆಗಾಗಿ ಶ್ರಮಿಸುವ ಪೌರ ಕಾರ್ಮಿಕರು ಸ್ವಚ್ಛ ಭಾರತದ ನಿಜವಾದ ರಾಯಭಾರಿಗಳಾಗಿದ್ದಾರೆ. ಅವರಿಗೆ ಗೌರವ ನೀಡುವುದು ನಮ್ಮೆಲ್ಲರ ಕರ್ತವ್ಯ. ಹೀಗಾಗಿ ಪೌರಕಾರ್ಮಿಕರ

ಆರೋಗ್ಯ ತಪಾಸಣಾ ಶಿಬಿರಗಳು ನಿಯಮಿತವಾಗಿ ನಡೆಯಬೇಕು ಎಂದರು.

ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ ಮಾತನಾಡಿ, ಪಟ್ಟಣದ ಸ್ವಚ್ಛತಾ ಸೇನಾನಿಗಳಾದ ಪೌರ ಕಾರ್ಮಿಕರ ಆರೋಗ್ಯ ತಪಾಸಣೆಯನ್ನು ವರ್ಷದಲ್ಲಿ 2-3 ಬಾರಿ ನಡೆಸುವುದರ ಜತೆಗೆ ಆರೋಗ್ಯ ರಕ್ಷಣೆಗಾಗಿ ಕಿಟ್‌ಗಳ ವಿತರಣೆ ಹಾಗೂ ಸ್ವಚ್ಛತೆಯ ಸಂದರ್ಭದಲ್ಲಿ ಪೌರಕಾರ್ಮಿಕರು ಅನುಸರಿಸಬೇಕಾದ ಕ್ರಮಗಳ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಪುರಸಭೆ ಸಮುದಾಯ ಸಂಘಟನಾಧಿಕಾರಿ ಬಿ.ಮಲ್ಲಿ ಕಾರ್ಜುನಗೌಡ ಮಾತನಾಡಿ, ಪೌರ ಕಾರ್ಮಿಕರ ರಕ್ತ ತಪಾಸಣಾ ಶಿಬಿರದಲ್ಲಿ ಮಧುಮೇಹ, ರಕ್ತದೊತ್ತಡ, ಅಸ್ತಮಾ, ಚರ್ಮರೋಗ, ಇಸಿಜಿ ಸೇರಿ ಮುಂತಾದ ಕಾಯಿಲೆಗಳ ತಪಾಸಣೆಯನ್ನು ನಡೆಸಲಾಗುತ್ತದೆ ಎಂದರು.

ಈ ವೇಳೆ ಪುರಸಭೆ ಉಪಾಧ್ಯಕ್ಷೆ ಸವಿತಾ ಬಿದರಳ್ಳಿ, ಸದಸ್ಯರಾದ ಶಿವರಾಜ ಘೋರ್ಪಡೆ, ವೀರಪ್ಪ ಪಟ್ಟಣಶೆಟ್ಟಿ, ಮುದಿಯಪ್ಪ ಮುಧೋಳ, ಕನಕಪ್ಪ ಅರಳಿಗಿಡದ, ಶರಣಪ್ಪ ಉಪ್ಪಿನಬೆಟಗೇರಿ, ರಫೀಕ್ ತೋರಗಲ್, ಆರೋಗ್ಯ ಸುರಕ್ಷಾ ಸಮಿತಿ ಸದಸ್ಯ ಶರಣಪ್ಪ ಚಳಗೇರಿ, ಶ್ರೀಧರ ಬಿದರಳ್ಳಿ, ಸಿದ್ದಣ್ಣ ಚೋಳಿನ, ಗುಲಾಂ ಹುನಗುಂದ, ಅಧಿಕಾರಿಗಳಾದ ಶಿವಕುಮಾರ ಇಲಾಳ, ರಾಘವೇಂದ್ರ ಮಂತಾ ಮುಂತಾದವರಿದ್ದರು.

ನಿಧನ ವಾರ್ತೆ

ರುಕ್ಮಮ್ಮ ಪಾಟೀಲ

ಲಕ್ಷ್ಮೇಶ್ವರ: ತಾಲೂಕಿನ ಮಾಡಳ್ಳಿ ಗ್ರಾಮದ ಹಿರಿಯ ಮಹಿಳೆ ರುಕ್ಮಮ್ಮ ಕೃಷ್ಣಗೌಡ ಪಾಟೀಲ (75) ಅವರು ಇತ್ತೀಚೆಗೆ ನಿಧನರಾದರು. ಮೃತರಿಗೆ ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವಿದೆ.

ಸ್ವಚ್ಛತಾ ಹಿ ಸೇವಾ ಕಾರ್ಯಕ್ರಮದಲ್ಲಿ ತಾ.ಪಂ ಇಓ ಮಂಜುಳಾ ಹಕಾರಿ

ಸ್ವಚ್ಛತೆ ಮೊದಲ ಆದ್ಯತೆಯಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬರೂ ನಿಮ್ಮ ಮನೆ ಹಾಗೂ ಮನೆಯ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿ ಇಟ್ಟಾಗ ಮಾತ್ರ ನಿಮ

ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ.ಪಾಟೀಲ ಅವರ ಸೆಪ್ಟೆಂಬರ್ 19 ರ ಪ್ರವಾಸ ಕಾರ್ಯಕ್ರಮ ಇಂತಿದೆ.

ಸೆಪ್ಟೆಂಬರ್ 19ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕಳಸಾಪುರ ರಸ್ತೆಯಲ್ಲಿ ಸ್ನಾತಕೋತ್ತರ ಕೇಂದ್ರದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 10 ಗಂಟೆಗೆ ನಗರದ ಕೆ.ಎಚ್.ಪಾಟೀಲ್ ಕ್ರೀಡಾಂಗಣದಲ್ಲಿ ಗದಗ ತಾಲೂಕಾ ದಸರಾ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಬೆ.11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗದಗ ತಾಲೂಕು ಮಟ್ಟದ ಗ್ಯಾರಂಟಿ ಸಮಿತಿ ಸಭೆಯಲ್ಲಿ ಭಾಗವಹಿಸುವರು. ಸಾಯಂಕಾಲ 4.30 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಸಮಿತಿ ಸಭೆಯಲ್ಲಿ ಭಾಗವಹಿಸುವರು. ಸಂಜೆ 5.30 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಲಕ್ಕುಂಡಿ ಪ್ರಾಧಿಕಾರದ ಸಭೆಯಲ್ಲಿ ಪಾಲ್ಗೊಳ್ಳುವರು. ರಾತ್ರಿ 10.20 ಗಂಟೆಗೆ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

ಮುನಿರತ್ನರ ಶಾಸಕತ್ವ ರದ್ದುಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಓರ್ವ ಜನಪ್ರತಿನಿಧಿಯಾಗಿ ಮಹಿಳೆಯರ ಬಗ್ಗೆ ಕೀಳುಮಟ್ಟದ ಮಾತುಗಳನ್ನಾಡಿದ ಶಾಸಕ ಮುನಿರತ್ನರ ನಡೆ ಅತ್ಯಂತ ಖಂಡನೀಯ. ಸಭಾಪತಿಗಳು ಮುನಿರತ್ನರ ಶಾಸಕತ್ವವನ್ನು ಈ ಕೂಡಲೇ ರದ್ದುಪಡಿಸಬೇಕೆಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಕರ್ನಾಟಕ ರಾಜ್ಯ ಅಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಒತ್ತಾಯಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಇದು ಕೇವಲ ಒಕ್ಕಲಿಗ ಸಮುದಾಯಕ್ಕೆ ಮಾತ್ರವಲ್ಲ ಮಹಿಳಾ ಸಮೂಹಕ್ಕೆ ಮಾಡಿದ ಅವಮಾನವಾಗಿದೆ. ಮಹಿಳೆಯರ ಬಗ್ಗೆ ಇವರಿಗೆ ಎಷ್ಟು ಗೌರವವಿದೆ ಎಂಬುದು ಇವರ ಈ ಕೃತ್ಯ ದಿಂದ ಬಹಿರಂಗಗೊಂಡಿದೆ. ಇಂತಹ ಶಾಸಕರಿಗೆ ನೈತಿಕತೆಯ ಪಾಠದ ಅಗತ್ಯವಿದೆ.

ಲೋಕ ಅದಾಲತ್: ಗದಗ ಜಿಲ್ಲೆಯಲ್ಲಿ 21,668 ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥ

8 ಜೋಡಿ ದಂಪತಿಗಳ ಪುನರ್ಮಿಲನ

■ ವಿಜಯಸಾಕ್ಷಿ ಸುದ್ದಿ, ಗದಗ

ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯ ನವದೆಹಲಿ, ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಗದಗ ಜಿಲ್ಲೆಯಲ್ಲಿ ಸೆ.14ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲೆಯಲ್ಲಿ ಒಟ್ಟು 14 ಬೆಂಚ್‌ಗಳನ್ನು ರಚಿಸಿ ರಾಜೀ ಸಂಧಾನಕ್ಕೆ ಆಯ್ಕೆ ಮಾಡಿಕೊಳ್ಳಲಾಗಿತ್ತು. ಒಟ್ಟು 21,668 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ. ಅದರಲ್ಲಿ 1,770 ನ್ಯಾಯಾಲಯದಲ್ಲಿರುವ ಚಾಲ್ತಿ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಲಾಗಿದೆ ಹಾಗೂ 19,898 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಲಾಗಿದೆ.

ಇತ್ಯರ್ಥಗೊಂಡ ಪ್ರಕರಣಗಳಲ್ಲಿ ಪಾಲುವಾಟ್ಟಿ ವಿಭಾಗದ 103 ಪ್ರಕರಣಗಳು, 20 ಮೋಟಾರು ವಾಹನ ಅಪಘಾತ ಪ್ರಕರಣಗಳು, 65 ಚೆಕ್‌ಬೌನ್ಸ್ ಪ್ರಕರಣಗಳು, 56 ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು, 106 ಇತರೆ ಸಿವಿಲ್ ಪ್ರಕರಣಗಳು, 64 ಬ್ಯಾಂಕ್ ಹಾಗೂ ಹಣ ವಸೂಲಾತಿ ಪ್ರಕರಣಗಳು, 60 ಎಲ್.ಎ.ಸಿ ಎಕ್ಸಿಕ್ಯೂಷನ್ ಪ್ರಕರಣಗಳು, 38 ವೈವಾಹಿಕ ಪ್ರಕರಣಗಳು, 33 ವಿದ್ಯುತ್ ಕಾಯ್ದೆ ಪ್ರಕರಣಗಳು ಸೇರಿದಂತೆ ಒಟ್ಟು 1,770 ಚಾಲ್ತಿ ಪ್ರಕರಣಗಳನ್ನು ಒಟ್ಟು ರೂ. 11,70,37,527/- ಗಳಿಗೆ ಪರಿಹಾರ ಒದಗಿಸುವುದರ ಮೂಲಕ ರಾಜೀ ಸಂಧಾನ ಮೂಲಕ ಇತ್ಯರ್ಥಪಡಿಸಲಾಗಿದೆ. ಪಾಲುವಾಟ್ಟಿ ವಿಭಾಗದ ಒಂದು ಪ್ರಕಣವು ರೂ. 1,56,41,000/- ಗೆ ರಾಜಿ ಆಗಿದ್ದು, ಒಟ್ಟು, 19,898 ವ್ಯಾಜ್ಯಪೂರ್ವ ಪ್ರಕರಣಗಳು ರೂ.6,85,86,576ಗಳಿಗೆ ರಾಜೀ ಸಂಧಾನವಾಗಿವೆ.

ರಾಷ್ಟ್ರೀಯ ಲೋಕ ಅದಾಲತ್‌ಗೆ ಸಹಕಾರ ನೀಡಿದ ವಕೀಲ ವೃಂದದವರಿಗೆ, ಪಕ್ಷಗಾರರಿಗೆ, ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ, ಸಿಬ್ಬಂದಿವರ್ಗದವರಿಗೆ, ಜಿಲ್ಲಾ ನ್ಯಾಯಾಲಯದ ತಾಂತ್ರಿಕ ಸಿಬ್ಬಂದಿವರ್ಗದವರಿಗೆ, ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಅಬಕಾರಿ ಇಲಾಖೆ, ಜಿಲ್ಲಾ ನಗರಾಭಿವೃದ್ಧಿ ಕೋಶ, ಕಂದಾಯ ಇಲಾಖೆ, ಜಿಲ್ಲಾ ಸರ್ಕಾರಿ ವಕೀಲರಿಗೆ, ಅಪರ ಜಿಲ್ಲಾ ಸರ್ಕಾರಿ ವಕೀಲರಿಗೆ, ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ, ಅಭಿಯೋಜನಾ ಇಲಾಖೆ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ, ವಿಮೆ ಕಂಪನಿಯವರಿಗೆ, ಉಪವಿಭಾಗಾಧಿಕಾರಿಗಳಿಗೆ, ಗದಗ ಬೆಟಗೇರಿ ನಗರಸಭೆ, ಬಿಎಸ್‌ಎನ್‌ಎಲ್, ಅಬಕಾರಿ ಇಲಾಖೆ, ಬ್ಯಾಂಕ್, ವಾರ್ತಾ ಇಲಾಖೆಯವರಿಗೆ ಹಾಗೂ ಎಲ್ಲಾ ಮಾಧ್ಯಮದವರಿಗೆ, ಲೋಕ ಅದಾಲತ್‌ಗೆ ಸಹಕಾರ ನೀಡಿದ ಎಲ್ಲರಿಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಅವರು ಧನ್ಯವಾದಗಳನ್ನು ಅರ್ಪಿಸಿದ್ದಾರೆ.

8 ಜೋಡಿಗಳ ಪುನರ್ಮಿಲನ

ವಿಶೇಷವಾಗಿ ಒಟ್ಟು 8 ಜೋಡಿಗಳು ಈ ರಾಷ್ಟ್ರೀಯ ಲೋಕ ಅದಾಲತದಲ್ಲಿ ಪುನಃ ಒಂದುಗೂಡಿಹೋಗಿದ್ದು ವಿಶೇಷವಾಗಿದೆ. ಗದಗದಲ್ಲಿ ಜರುಗಿದ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮದಲ್ಲಿ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ, ಹಾಗೂ ಇನ್ನುಳಿದ ನ್ಯಾಯಾಧೀಶರು ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಂ.ಐ. ಹಿರೇಮನಿಪಾಟೀಲ, ಸಂಧಾನಕಾರ ವಕೀಲರು, ಪಕ್ಷಗಾರರು ಸೇರಿದಂತೆ ಲೋಕ ಅದಾಲತ್ ಯಶಸ್ವಿಗೊಳಿಸಿದರು. ಅದೇರೀತಿ ಎಲ್ಲಾ ತಾಲೂಕಗಳ ನ್ಯಾಯಾಧೀಶರು ಹಾಗೂ ವಕೀಲ ವೃಂದದವರು, ಅಭಿಯೋಜನಾ ಇಲಾಖೆ, ಪೊಲೀಸ್ ಇಲಾಖೆಯವರು ಆಯಾ ತಾಲೂಕಾ ನ್ಯಾಯಾಲಯಗಳಲ್ಲಿ ಲೋಕ ಅದಾಲತ್‌ದಲ್ಲಿ ಪಾಲ್ಗೊಂಡು ರಾಜೀ ಸಂಧಾನ ಯಶಸ್ವಿಗೊಳಿಸಿದರು.

ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಉದ್ಘಾಟಿಸಿದ ಅಕ್ಬರಸಾಬ ಬಬರ್ಚಿ ಅಭಿಮತ

ವಿಶ್ವಕರ್ಮ ಸಮಾಜದ ವಿಶೇಷ ಕಲೆಗಳನ್ನು ಉಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವಕರ್ಮ ಸಮಾಜದವರು ಕಠಿಣ ಪರಿಶ್ರಮ ಮತ್ತು ಶ್ರದ್ಧೆಯಿಂದ ಕೆಲಸ ನಿರ್ವಹಸಿ ವಿಶೇಷ ಕಲೆಯ ಮೂಲಕ ಸಮಾಜಕ್ಕೆ ಅಪಾರ ಕೊಡುಗೆಯನ್ನು ನೀಡಿದ್ದಾರೆ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಹೇಳಿದರು.

ನಗರದ ವಿಶ್ವಕರ್ಮ ಸಮುದಾಯ ಭವನದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜರುಗಿದ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವಕರ್ಮ ಸಮಾಜದವರು ಏಕಾಗ್ರತೆಯಿಂದ ಶಿಲ್ಪಕಲೆ, ಪತ್ತಾರ, ಬಡಿಗೇರ ಅಂತಹ ಅನೇಕ ವಿಶೇಷ ಕಲೆಯನ್ನು ಕಲಿತು ಉತ್ತಮ ಪ್ರತಿಭೆಯನ್ನು ಹೊಂದಿ ಸುಂದರವಾದ ರೂಪ ನೀಡುತ್ತಾರೆ. ಪ್ರಸ್ತುತ ದಿನಮಾನದಲ್ಲಿ ಯಂತ್ರಗಳ ಹಾವಳಿ ಹೆಚ್ಚಾಗಿದ್ದು, ಮಾನವ ತಯಾರಿಸುತ್ತಿದ್ದ ಎಲ್ಲಾ ರೀತಿಯ ಶೈಲಿಗಳನ್ನು ಯಂತ್ರಗಳು ಸರಾಗವಾಗಿ ಮಾಡುತ್ತಿವೆ. ಹಾಗಾಗಿ ಈ ಕಲೆಗಳು ಕೇವಲ ಯಂತ್ರಗಳಿಗೆ ಸೀಮಿತವಾಗದೆ, ನಿಮ್ಮ ಪೂರ್ವಜರು ನೀಡಿದ ವಿದ್ಯೆಯನ್ನು ಇಂದಿನ ಯುವಪೀಳಿಗೆಗೆ ಕಲಿಸಿ ಈ ಕಲೆಯನ್ನು ಉತ್ತಂಗಕ್ಕೆ ಬೆಳೆಸಬೇಕು ಎಂದರು.

ಶ್ರೀ ಗುರು ಭೀಮಾ ಶಂಕರ ವಿದ್ಯಾಪೀಠದ ಅಧ್ಯಕ್ಷರಾದ ಬಸವರಾಜ ಬಡಿಗೇರ ಮಾತನಾಡಿ, ಮೂಲತಃ ವಿಶ್ವಕರ್ಮ ಸಮಾಜದವರು ತ್ಯಾಗ ಸ್ವರೂಪಿಗಳು. ಎಲ್ಲವನ್ನು ಕಳೆದುಕೊಂಡರೂ ಸದಾ ಸಂತೋಷದಿಂದ ಇದ್ದು, ಶ್ರಮ ಸಂಸ್ಕೃತಿಯಲ್ಲಿ ನಂಬಿಕೆಯಿಟ್ಟು ವಿಷದಲ್ಲಿ ಅಮೃತ ಕಂಡು, ಮಣ್ಣಿನಲ್ಲಿ ಮಾಣಿಕ್ಯವನ್ನು ಕಂಡವರು. ನಮ್ಮ ಸಮಾಜ ತುಂಬಾ ಹಳೆಯದಾಗಿದ್ದು, ವೇದ-ಪುರಾಣಕ್ಕೂ ಮೊದಲೇ ವಿಶ್ವಕರ್ಮ ಸಮಾಜದ ಅಸ್ತಿತ್ವದಲ್ಲಿತ್ತು ಎಂದರು.

ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯ ಮೆಹಬೂಬಸಾಬ ನದಾಫ್, ಕುರ್ತಕೋಟಿ ಎಜ್ಯುಕೇಶನ್ ಸೊಸೈಟಿ ಅಧ್ಯಕ್ಷ ಗೀರಿಶ ಎಂ.ಡಬಾಲಿ, ಕೃಷ್ಣಗೌಡ ಪಾಟೀಲ, ಗದಗ ತಾಲೂಕಾ ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ, ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಖಜಾನೆ ಇಲಾಖೆ ಉಪನಿರ್ದೇಶಕ ವಿ.ಹರಿನಾಥ ಬಾಬು ಸೇರಿದಂತೆ ಸಮಾಜದ ಗಣ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಪ್ರಸಾದ ಸುತಾರ ಮತ್ತು ತಂಡದವರು ಸಂಗೀತ ಪ್ರಸ್ತುತಪಡಿಸಿದರು. ಕಾರ್ಯಕ್ರಮವನ್ನು ವಿಶ್ವನಾಥ ಕಮ್ಮಾರ ನಿರ್ವಹಿಸಿದರು.

ಶಾಸ್ತ್ರೀಯ ಕಲೆಗಳು ಉಳಿಯಬೇಕು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭರತನಾಟ್ಯ ಒಂದು ಶ್ರೇಷ್ಠ ಕಲೆ. ಭರತನಾಟ್ಯದಲ್ಲಿ ಸಾಂಸ್ಕೃತಿಕ ತಳಹದಿಯಲ್ಲೇ ಹೊಸ ಪರಿಕಲ್ಪನೆ ಮೇಳೈಸಿದಾಗ ಭರತನಾಟ್ಯ ಕಲೆ ಶ್ರೀಮಂತವಾಗಿ ಬೆಳೆಯುತ್ತದೆ ಎಂದು ವಿದ್ವಾನ್ ಮಂಜುನಾಥ್ ಎಸ್.ಪುತ್ತೂರ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಕಲಾ ವೈಭವ ಸಾಂಸ್ಕೃತಿಕ ವಿವಿಧೋದ್ದೇಶಗಳ ಸಂಸ್ಥೆಯಿಂದ ನಡೆದ 'ನೃತ್ಯಾಮೃತ' ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಭರತನಾಟ್ಯದಂತಹ ಶಾಸ್ತ್ರೀಯ ಕಲೆಗಳು ಉಳಿಯಬೇಕು ಮತ್ತು ಅವು ಗುರು ಪರಂಪರೆಯಲ್ಲಿ ಮುಂದುವರೆಯಬೇಕು. ಶಾಸ್ತ್ರೀಯ ಕಲೆಗಳು ಭಾರತೀಯ ಸಂಸ್ಕೃತಿಯ ಬೇರು. ಮುಂದಿನ ಜನಾಂಗಕ್ಕೆ ಭಾರತೀಯತೆಯ ವೈಶಿಷ್ಯಪೂರ್ಣ ವಿಚಾರಧಾರೆ ತಿಳಿಸುವಲ್ಲಿ ಇಂತಹ ಕಾರ್ಯಕ್ರಮಗಳು ಅವಶ್ಯ. ಮಕ್ಕಳನ್ನು ಇಂತಹ ವೈಶಿಷ್ಯಪೂರ್ಣ ಕಲೆಯಲ್ಲಿ ಬೆಳೆಯುವಂತೆ ಮಾಡುವ ಮೂಲಕ ನಮ್ಮ ಸಂಸ್ಕೃತಿ, ಸಂಸ್ಕಾರ, ಕಲೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ, ಮಾಜಿ ಸದಸ್ಯ ಸುನೀಲ ಮಹಾಂತಶೆಟ್ಟರ ಮಾತನಾಡಿ, ಮೊದಲು ನಗರ ಪ್ರದೇಶಗಳಿಗೆ ಸೀಮಿತವಾಗಿದ್ದ ಈ ಕಲೆ ಇತ್ತೀಚೆಗೆ ಗ್ರಾಮೀಣ ಪ್ರದೇಶದಲ್ಲಿಯೂ ಸಾಕಷ್ಟು ಜನರನ್ನು ಸೆಳೆಯುತ್ತಿದೆ. ಪಟ್ಟಣದಲ್ಲಿ ಹಲವಾರು ವರ್ಷಗಳಿಂದ ಭರತನಾಟ್ಯವನ್ನು ನೂರಾರು ಮಕ್ಕಳಿಗೆ ಕಲಿಸುವ ಕಾರ್ಯ ಮಾಡುತ್ತಿರುವ ಭವ್ಯ ಕತ್ತಿಯವರು ಸೇವೆ ಶ್ಲಾಘನೀಯ ಎಂದರು.

ಸಭೆಯಲ್ಲಿ ಶಕ್ತಿ ಕತ್ತಿ, ವೀಣಾ ಪಾಟೀಲ, ಕಾವ್ಯಾ ವಡಕಣ್ಣವರ, ಪ್ರವೀಣ ಕತ್ತಿ, ಸಂಸ್ಥೆಯ ಅಧ್ಯಕ್ಷೆ ಭವ್ಯ ಕತ್ತಿ, ಎಚ್.ಡಿ. ನಿಂಗರಡ್ಡಿ, ವಿಜಯಾ ಯಲಿಶೂರ, ರಮೇಶ ನವಲೆ, ಜೆ.ಡಿ. ಲಮಾಣಿ, ನಿರ್ಮಲಾ ಗೌರಿ, ಬಿ.ಸಿ. ಪಟ್ಟೇದ, ಪಿ.ಎಸ್. ಸಿದ್ದನಗೌಡ್ರ, ಬಸೀರಅಹ್ಮದ ಚೌರಿ, ಈಶ್ವರ ಮೆಡ್ಲೇರಿ, ಅನ್ನದಾನಿ ವಾಲಿಶೆಟ್ಟರ, ಅಶೋಕ ಪೂಜಾರ ಮುಂತಾದವರಿದ್ದರು.

ಬೀದಿ ಬದಿ ವ್ಯಾಪಾರಿಗಳ ಕೊಡುಗೆ ಕುರಿತು ರಾಷ್ಟ್ರೀಯ ಸಮ್ಮೇಳನ

ಬೀದಿ ಬದಿ ವ್ಯಾಪಾರಿಗಳು ಅಸಂಘಟಿತರಾಗಿದ್ದಾರೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಬೀದಿ ಬದಿ ವ್ಯಾಪಾರಿಗಳ ಸಂಘಟನೆಗಳ ಮಹಾಸಂಘದ ವತಿಯಿಂದ ಉತ್ತರಪ್ರದೇಶದ ವಾರಣಾಸಿ ಕೋಟೆ ಕೆಂಟ ಸ್ಥಿತ ಪ್ಲಾಜಾ ಹೋಟೆಲ್‌ನಲ್ಲಿ ಅಭಿವೃದ್ಧಿ ಹೊಂದುತ್ತಿರುವ ಭಾರತದ ಅರ್ಥವ್ಯವಸ್ಥೆಯಲ್ಲಿ ಬೀದಿ ಬದಿ ವ್ಯಾಪಾರಿಗಳ ಕೊಡುಗೆ ಕುರಿತು ಅಭಿಷೇಕ ನಿಗಮ್ ಹಾಗೂ ಅನ್ವರ್ ಶಿರಹಟ್ಟಿಯವರ ನೇತೃತ್ವದಲ್ಲಿ ರಾಷ್ಟ್ರೀಯ ಸಮ್ಮೇಳನ ಇತ್ತೀಚೆಗೆ ಜರುಗಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ದಕ್ಷಿಣ ಶಾಸಕರಾದ ಡಾ. ನೀಲಕಂಠ ತಿವಾರಿ ಮಾತನಾಡಿ, ಬೀದಿ ಬದಿ ವ್ಯಾಪಾರಿಗಳು ಭಾರತದ ಅರ್ಥವ್ಯವಸ್ಥೆಯ ಭಾಗವಾಗಿದ್ದು, ಅಸಂಘಟಿತರಾಗಿದ್ದಾರೆ. ದೇಶದ ಒಟ್ಟು ಜನಸಂಖ್ಯೆಯ ಒಂದು ಅತೀ ದೊಡ್ಡ ಭಾಗ ಬೀದಿ ಬದಿ ವ್ಯಾಪಾರಿಗಳಾಗಿದ್ದು, ಅವರ ಸಬಲೀಕರಣ ಮತ್ತು ಪೂರಕ ವಾತಾವರಣ ಕಲ್ಪಿಸುವ ಅಗತ್ಯವಿದೆ. ದೇಶದ ಅರ್ಥ ವ್ಯವಸ್ಥೆಯ ಶ್ರೇಯಸ್ಸು ಬೀದಿ ಬದಿ ವ್ಯಾಪಾರಿಗಳಿಗೆ ದೊರಕಬೇಕು ಎಂದು ಹೇಳಿದರು.

ಅನ್ವರ್ ಶಿರಹಟ್ಟಿ ಮಾತನಾಡಿ, ಪ್ರತಿ ರಾಜ್ಯದ ಪ್ರಮುಖ ಸ್ಥಳಗಳಲ್ಲಿ ಸಮ್ಮೇಳನಗಳನ್ನು ಆಯೋಜಿಸಿ ಸರಕಾರ ಗಮನ ಸೆಳೆಯುವ ಕಾರ್ಯವನ್ನು ಮಾಡಬೇಕಾಗಿದೆ ಮತ್ತು ಬೀದಿ ಬದಿ ವ್ಯಾಪಾರಿಗಳಿಗಾಗಿ ಇರುವ ಯೋಜನೆಗಳ ಅನುಷ್ಠಾನ ಸಮಿತಿ ರಚನೆ ಮಾಡಬೇಕೆಂದರು.

ಈ ಸಮ್ಮೇಳನದಲ್ಲಿ 21 ರಾಜ್ಯಗಳಿಂದ ಬೀದಿ ಬದಿ ವ್ಯಾಪಾರಿಗಳ ಪ್ರಮುಖ ಪದಾಧಿಕಾರಿಗಳು ಭಾಗವಹಿಸಿದ್ದರು. ಹರಿದ್ವಾರದಿಂದ ಸಂಜಯ್ ಚೋಪಡಾ, ಕರ್ನಾಟಕದಿಂದ ಅನ್ವರ್ ಶಿರಹಟ್ಟಿ, ಮಹಮ್ಮದಗೌಸ್ ಸವನೂರ, ಒಡಿಸ್ಸಾದಿಂದ ಪ್ರೀತಮ್ ಸಿಂಗ, ಛತ್ತೀಸಗಡದಿಂದ ಅಲೋಕ ಪಾಂಡೆ, ದೆಹಲಿಯಿಂದ ಸಾಗರ ಯಾದವ, ಮಧ್ಯಪ್ರದೇಶದಿಂದ ಭೋಪಾಲ ಸಿಂಗ ಲೋದಿ, ಒಡಿಸ್ಸಾದಿಂದ ಮಹೇಶ ಬಲ್, ಬನಾರಸ್‌ದಿಂದ ಅಭಿಷೇಕ ನಿಗಮ್, ತೆಲಂಗಾಣದಿಂದ ಸತೀಶಗೌಡ, ಜಮಸೆಡಪುರದಿಂದ ಆದಿಲ್, ಗುಜರಾತದಿಂದ ಅಕ್ಷಿತಾ ಸೋಳಂಕಿ, ಪಶ್ಚಿಮ ಬಂಗಾಳ ಕಲ್ಕತ್ತಾದಿಂದ ಚಂದ್ರಕಲಾ ಪಾಂಡೆ, ಕಾನಪುರದಿಂದ ಸತ್ಯನಾರಾಯಣ ಜಿ, ಪ್ರಯಾಗರಾಜ್‌ನಿಂದ ಗಣೇಶ ಪ್ರಸಾದ ಗುಪ್ತಾ, ಲೀಲಾವತಿ ಮುಂತಾದವರು ಭಾಗವಹಿಸಿದ್ದರು. ಅಧ್ಯಕ್ಷತೆಯನ್ನು ರಾಜೇಂದ್ರ ಪ್ರಸಾದ ಸಿಂಗ್ ವಹಿಸಿದ್ದರು. ಹರಿಶಂಕರ ಸಿಂಗ್ ವಂದಿಸಿದರು.

ಫೆಡರೇಷನ್ ಆಫ್ ಫ್ರೀ ಟ್ರೇಡ್ ಯೂನಿಯನ್ ಆಫ್ ಇಂಡಿಯಾದ ಮಹಾ ಸಚಿವರಾದ ನೀರಜ್ ಚೌಬೆ ಮಾತನಾಡಿ, ರಾಷ್ಟ್ರೀಯ ಬೀದಿ ಬದಿ ವ್ಯಾಪಾರಿ ಸಂಘಟನೆ ಮಾಹಾಸಂಘವು ದೇಶದ ಆಸಂಘಟಿತ ವಲಯದ ಒಂದು ಅತಿ ದೊಡ್ಡ, ಸರ್ವಶ್ರೇಷ್ಠ ಸಂಘಟನೆಯಾಗಿ ಹೊರಹೊಮ್ಮುತ್ತಿದೆ. ದೇಶದ 28 ರಾಜ್ಯಗಳಲ್